ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

ಸಂಪಾದಕರು: ಸುಂದರ್ Editor : Sundar

Volume: 01, Issue: 53 RNI Number : KNKAN/25/A2770 27-02-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :53 ರಾಯಚೂರು 27-02-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ಒಳ ಮೀಸಲಾತಿ ವಿಧೇಯಕಕ್ಕೆ ರಾಜ್ಯಪಾಲರಿಂದ ಅಂಗೀಕಾರ

ಬೆಂಗಳೂರು,ಫೆ.26-

ಹಲವು ದಿನಗಳಿಂದ ಬಾಕಿ ಉಳಿಸಿಕೊಂಡಿದ್ದ ಪರಿಶಿಷ್ಟ ಜಾತಿಗಳ (ಉಪ ವರ್ಗೀಕರಣ) ವಿಧೇಯಕಕ್ಕೆ-2025 (2025) ಕೊನೆಗೂ ರಾಜ್ಯಪಾಲರು ಅಂಗೀಕರಿಸಿದ್ದಾರೆ.



ಮೀಸಲಾತಿ ವಿಚಾರದಲ್ಲಿ ಒಳ ಪಂಗಡಗಳ ನಡುವೆ ಗೊಂದಲ ಏರ್ಪಟ್ಟಿದ್ದರಿಂದ ರಾಜ್ಯಪಾಲ ಥಾವರ್ ಚೆಂದ್ ಗೆಹ್ಲೋಟ್ ಅವರು ವಿಧೇಯಕಕ್ಕೆ ಸಹಿ ಹಾಕದೆ ಬಾಕಿಯುಳಿಸಿಕೊಂಡಿದ್ದರು. ಆದರೆ, ಇಂದು (ಫೆಬ್ರವರಿ 26) ದಲಿತ ಸಮುದಾಯದ ಸಚಿವರು ರಾಜ್ಯಪಾಲರನ್ನು ಭೇಟಿ ಮಾಡಿ, ಧಾರವಾಡದಲ್ಲಿ ಉದ್ಯೋಗಾಕಾಂಕ್ಷಿಗಳ ಪ್ರತಿಭಟನೆ ಬಗ್ಗೆ ಪ್ರಸ್ತಾಪಿಸಿ ವಿಧೇಯಕಕ್ಕೆ ಸಹಿ ಹಾಕುವಂತೆ ಮನವಿ ಮಾಡಿದ್ದಾರೆ. ಇದರ ಬೆನ್ನಲ್ಲೇ ರಾಜ್ಯಪಾಲರು ಪರಿಶಿಷ್ಟ ಜಾತಿಗಳ ಮೀಸಲಾತಿ ವಿಧೇಯಕಕ್ಕೆ ಅನುಮೋದನೆ ನೀಡಿದ್ದಾರೆ.

ಕರ್ನಾಟಕ ಅನುಸೂಚಿತ ಜಾತಿಗಳ ಉಪವರ್ಗೀಕರಣ ವಿಧೇಯಕಕ್ಕೆ

3ನೇ ಪುಟಕ್ಕೆ

ಒಳಮೀಸಲಾತಿಯ ಕಾರಣ ನೇಮಕಾತಿ ಪ್ರಕ್ರಿಯೆ ವಿಳಂಬ: ಸಿಎಂ ಸಿದ್ದರಾಮಯ್ಯ

ಉಡುಪಿ,ಫೆ.26-

ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಹಂತಹಂತವಾಗಿ ಭರ್ತಿ ಮಾಡಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು. ಅವರು ಬುಧವಾರ ಕಾರ್ಕಳದಲ್ಲಿ ಮಾಧ್ಯಮದವರಿಗೆ ಈ ವಿಷಯ ತಿಳಿಸಿದರು.

ಉಡುಪಿ ಜಿಲ್ಲೆಯ ಕಾರ್ಕಳದಲ್ಲಿ ನಿನ್ನೆ ಆಯೋಜಿಸಿದ್ದ ಕಿಸಾನ್ ಸಭಾ ಟ್ರಸ್ಟ್‌ನ ಮಹಾತ್ಮ ಗಾಂಧಿ ವಸತಿ ಪ್ರೌಢಶಾಲೆಯ 35ನೇ ವರ್ಷದ ವಾರ್ಷಿಕೋತ್ಸವ ಸಮಾರಂಭ ಹಾಗೂ ಕಿಸಾನ್ ಸಭಾ ಸಭಾಂಗಣದ ಉದ್ಘಾಟನೆ ಬಳಿಕ ಮಾತನಾಡಿದರು. ಉದ್ಯೋಗ ಒದಗಿಸುವ ಭರವಸೆಯನ್ನು ರಾಜ್ಯ ಸರ್ಕಾರ ನೀಡುತ್ತದೆ. ಒಳಮೀಸಲಾತಿಯ ಕಾರಣ ನೇಮಕಾತಿ ಪ್ರಕ್ರಿಯೆ ವಿಳಂಬವಾಯಿತು. ಪ್ರಸ್ತುತ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು. ಕೆಲ ಇಲಾಖೆಗಳ ನೇಮಕಾತಿ ಬಗ್ಗೆ ಬಜೆಟ್‌ನಲ್ಲೂ ಘೋಷಿಸಲಾಗುವುದು ಎಂದರು.

ಆನೆದಾಳಿ - ಬ್ಯಾರಿಕೇಡ್ ನಿರ್ಮಾಣಕ್ಕೆ ಕ್ರಮ: ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಾಡಾನೆಗಳ ಹಾವಳಿ ಮಿತಿ ಮೀರಿದೆ. ಇತ್ತೀಚೆಗೆ ಆನೆ ದಾಳಿ ಪ್ರಕರಣಗಳು ಹೆಚ್ಚುತ್ತಿರುವ ಬಗ್ಗೆ ಮಾಧ್ಯಮದವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿಎಂ, ಆನೆ, ಚಿರತೆ ಮತ್ತು ಹುಲಿಗಳ ಸಂಖ್ಯೆ



ಹೆಚ್ಚಾಗಿರುವುದರಿಂದ, ಮಾನವ ಹಾಗೂ ವನ್ಯಪ್ರಾಣಿ ಸಂಘರ್ಷಕ್ಕೆ ಕಾರಣವಾಗುತ್ತಿದೆ ಎಂಬ ಮಾಹಿತಿ ಇದೆ. ಆದ್ದರಿಂದ ವನ್ಯಜೀವಿಗಳು ಜನಪ್ರದೇಶಗಳಿಗೆ ಬರದಂತೆ ಕಾಡಂಚಿನ ಪ್ರದೇಶಗಳಲ್ಲಿ ದೊಡ್ಡ ಪ್ರಮಾಣದಲ್ಲಿ ಬ್ಯಾರಿಕೇಡ್ ನಿರ್ಮಿಸಲು ಕ್ರಮಕೈಗೊಳ್ಳಲಾಗಿದೆ ಎಂದು ಹೇಳಿದರು.

ಮಾದಕವಸ್ತುಗಳ ನಿಗ್ರಹ: ಶಿವಮೊಗ್ಗ ಜಿಲ್ಲೆಯಲ್ಲಿ ನಡೆದ ವಿದ್ಯಾರ್ಥಿ ಹತ್ಯೆ ಹಾಗೂ ಅಪ್ರಾಪ್ತರಲ್ಲಿ ಗಾಂಜಾ ಸೇವನೆ ವ್ಯಾಪಕವಾಗುತ್ತಿರುವ ಬಗ್ಗೆ

3ನೇ ಪುಟಕ್ಕೆ

ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆ

ರೈತರಿಗೆ ಯಾವುದೇ ತೊಂದರೆಯಾಗದತೆ ನೋಡಿಕೊಳ್ಳಿ: ಜಿಲ್ಲಾಧಿಕಾರಿ ನಿತೀಶ್ ಕೆ

ರಾಯಚೂರು ಫೆ.26 -

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಬಿಳಿಜೋಳ ಉತ್ಪನ್ನವನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ಖರೀದಿ ಸಮಯದಲ್ಲಿ ರೈತರಿಗೆ ಯಾವುದೇ ರೀತಿಯ ತೊಂದರೆಯಾಗದತೆ ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಂಬಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಇತ್ತೀಚೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಜೋಳ ಖರೀದಿ ಕುರಿತು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೇ ಸರ್ಕಾರದ ನಿರ್ದೇಶನ ಮತ್ತು ಜಿಲ್ಲಾಡಳಿತದಿಂದ ನಿಗದಿಪಡಿಸಲಾಗಿರುವ ಮಾನದಂಡಗಳನ್ವಯ ಈಗಾಗಲೇ ನೋಂದಣಿಯಾಗಿರುವ ಅಥವಾ ನೋಂದಣಿಯಾಗುವ ರೈತರಿಂದ ಬಿಳಿಜೋಳವನ್ನು ರೈತರಿಗೆ ಯಾವುದೇ ತೊಂದರೆಯಾಗದತೆ ಜಿಲ್ಲೆಯಲ್ಲಿ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ವತಿಯಿಂದ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕೆದರು.

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಜೋಳ ಖರೀದಿಗೆ ಅವಶ್ಯವಿರುವ ಗೋಣಿ ಚೀಲಗಳ ಸಿದ್ದತೆಯನ್ನು ಮಾಡಿಕೊಳ್ಳಬೇಕು. ಖರೀದಿ ಕೇಂದ್ರದಲ್ಲಿ ಬಳಸುವ ಡಿಜಿಟಲ್ ತೂಕ ಮಾಪನ ಯಂತ್ರಗಳನ್ನು ಕಡ್ಡಾಯವಾಗಿ ಕಾನೂನು ಮಾಪಸಶಾಸ್ತ ಇಲಾಖೆಯಿಂದ ಸ್ಟ್ಯಾಂಪಿಗ್ ಮಾಡಿಸಿಕೊಳ್ಳುವಂತೆ ಖರೀದಿ ಕೇಂದ್ರದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಆಯಾ ಖರೀದಿ ಕೇಂದ್ರ ವ್ಯಾಪ್ತಿಯ ಕಾನೂನು ಮಾಪನ ಶಾಸ್ತ ಇಲಾಖೆಯ ನಿರೀಕ್ಷಕರುಗಳಿಗೆ ಸಂಬಧಪಟ್ಟ ಖರೀದಿ ಕೇಂದ್ರದಲ್ಲಿ ಬಳಸುತ್ತಿರುವ ಡಿಜಿಟಲ್ ತೂಕ ಮಾಪನ ಯಂತ್ರಗಳನ್ನು ಸ್ಟ್ಯಾಟಿಂಗ್ ಮಾಡಿಸಿರುವ ಬಗ್ಗೆ ಪರಿಶೀಲಿಸುವಂತೆ ಕಾನೂನು ಮಾಪನ ಶಾಸ್ತ ಇಲಾಖೆಯ ಸಹಾಯಕ ನಿಯಂತ್ರಕರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಈ ಹಿಂದಿನ ಸಾಲಿನಲ್ಲಿ ಸಮಯಕ್ಕೆ ಸರಿಯಾಗಿ ಲಾರಿಗಳು ಖರೀದಿ ಕೇಂದ್ರಗಳಿಗೆ ಬಾರದೇ ಇರುವುದರಿಂದ ಖರೀದಿ ಪ್ರಕ್ರಿಯೆಯು ಮಂದಗತಿಯಲ್ಲಿ ಸಾಗಿದ್ದು, ಈ ಸಾಲಿನಲ್ಲಿ ಆ ರೀತಿ ಆಗದಂತೆ ನೋಡಿಕೊಳ್ಳಬೇಕು. ಕಾರ್ಯಾದೇಶದಲ್ಲಿ ನೀಡಲಾಗಿರುವ 133 ಲಾರಿಗಳಿಗೆ ಜಿಪಿಎಸ್ ಅಳವಡಿಸಿಕೊಂಡು ಈ ಸಾಲಿನಲ್ಲಿ ನಿಯಮಾನುಸಾರ ಅಗತ್ಯಕ್ಕೆ ತಕ್ಕಂತೆ ಲಾರಿಗಳ ವ್ಯವಸ್ಥೆಯನ್ನು ಮಾಡಿಕೊಂಡು ಎಲ್ಲಾ ಖರೀದಿ ಕೇಂದ್ರಗಳಿಗೆ ನೀಡುವಂತೆ ಸಂಬಧಿಸಿದ ಅಧಿಕಾರಿಗಳಿಗೆ

3ನೇ ಪುಟಕ್ಕೆ

ಮಹತ್ವಾಕಾಂಕ್ಷಿ ಜಿಲ್ಲೆಗೆ ತಜ್ಞರ ನೇಮಕಕ್ಕೆ ಒತ್ತು ತಾಯಿ, ಮಕ್ಕಳ ಆರೈಕೆಗೆ ಜಿಲ್ಲಾಧಿಕಾರಿಗಳ ಸೂಚನೆಯಂತೆ ದೇವದುರ್ಗಕ್ಕೆ ಪ್ರಸೂತಿ ತಜ್ಞರ ನೇಮಕ

ರಾಯಚೂರು ಫೆ. 26 -

ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರಸೂತಿ ಆರೈಕೆ ಸೇವೆಗೆ ಹೆಚ್ಚಿನ ಮಹತ್ವ ನೀಡುತ್ತಿರುವ ಕರ್ನಾಟಕ ಸರಕಾರದ ದೂರ ದೃಷ್ಟಿಯನ್ನು ಹೊಂದಿದ ಹಿನ್ನಲೆ ಹಾಗೂ ಮಹತ್ವಾಕಾಂಕ್ಷಿ ಸಂಪೂರ್ಣತಾ ಯೋಜನೆಯಡಿ ಜಿಲ್ಲೆಯು ಇರುವ ಕಾರಣದಿಂದಾಗಿ ಜಿಲ್ಲೆಯಲ್ಲಿ ತಾಯಿ ಮಕ್ಕಳ ಸುರಕ್ಷತೆಗಾಗಿ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಅವರು ಖುದ್ದು ಒತ್ತಾಸೆ ಹಾಗೂ ಮುತವರ್ಜಿ ವಹಿಸಿ ಜಿಲ್ಲೆಯ ದೇವದುರ್ಗ ತಾಲೂಕಿಗೆ ಸೇವಾ ನಿರತ ಹಾಗೂ ಸ್ನಾತಕೋತ್ತರ



ಪದವಿ ಪೂರ್ಣಗೊಳಿಸಿ ಸ್ಥಳ ನಿಯುಕ್ತಿಗಾಗಿ ಕಾಯುತ್ತಿದ್ದ ಇಬ್ಬರೂ ಪ್ರಸೂತಿ ತಜ್ಞರನ್ನು ನೇಮಕ ಮಾಡಿಸುವ ಮೂಲಕ ದೇವದುರ್ಗ ತಾಲೂಕಿನ ಗ್ರಾಮೀಣ ಭಾಗದ ಜನತೆಯು ಹೆರಿಗೆಗಾಗಿ ರಾಯಚೂರಿಗೆ ಅಲೆಯುವುದನ್ನು ನಿಲ್ಲಿಸಿದ್ದಾರೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ ಸುರೇಂದ್ರ ಬಾಬು ಅವರು ತಿಳಿಸಿದ್ದಾರೆ.

ಸುಸಜ್ಜಿತ ಹೆರಿಗೆ ಕೊಠಡಿ, ಅತ್ಯಾಧುನಿಕ ಉಪಕರಣಗಳು, ನುರಿತ ವೈದ್ಯರುಗಳನ್ನು ಹೊಂದಿರುವ ಜಿಲ್ಲೆಯ ಆರೋಗ್ಯ ಕೇಂದ್ರಗಳಲ್ಲಿ ಕಡು ಬಡವರಿಗೆ ಗುಣಮಟ್ಟದ ಆರೋಗ್ಯ ಸೇವೆಯನ್ನು ಅದರಲ್ಲೂ ಹೆರಿಗೆಯೆನ್ನುವ ಮಹತ್ವಪೂರ್ಣ ಸನ್ನಿವೇಶದಲ್ಲಿ ಯಾವುದೇ ತೊಂದರೆ ಯಾಗದತೆ ಹೆರಿಗೆ ನಿರ್ವಹಿಸುವ ಜವಾಬ್ದಾರಿಯನ್ನು ಜಿಲ್ಲೆಯಲ್ಲಿ ಮಾಡಲಾಗುತ್ತಿದೆ. ಅಲ್ಲದೆ ತಕ್ಷಣವೇ ಶಸ್ತ್ರಚಿಕಿತ್ಸೆ ಕೈಗೊಳ್ಳುವ ಜವಾಬ್ದಾರಿಯ ನಿರ್ವಹಣೆಗಾಗಿ

3ನೇ ಪುಟಕ್ಕೆ



ಆರ್.ಡಿ.ಪಿ.ಆರ್ ಕ್ರೀಡಾಕೂಟಕ್ಕೆ ಅದ್ದೂರಿ ತೆರೆ

ನೌಕರರು ಉತ್ಸಾಹದಿಂದ ಕೆಲಸ ಮಾಡಲು: ಜಿ.ಪಂ ಸಿಇಓ ಈಶ್ವರ್ ಕಾಂದೂ ಸಲಹೆ

ರಾಯಚೂರು ಫೆಬ್ರವರಿ 26-

ಸರಕಾರಿ ನೌಕರರು ಒತ್ತಡದ ಮಧ್ಯೆಯು ಉತ್ಸಾಹದಿಂದ ಕೆಲಸ ಮಾಡುವ ಪ್ರವೃತ್ತಿಯನ್ನು ಮೈಗೊಡಿಸಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ಹೇಳಿದರು.

ನಗರದ ಕೃಷಿ ವಿವಿಯ ಆವರಣದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಪಂಚಾಯತ್ ವತಿಯಿಂದ

3ನೇ ಪುಟಕ್ಕೆ

ಶಿಶುನಾಳ ಶರೀಫ ಜಾತ್ರೆಯಲ್ಲಿ ಸಿರವಾರ ಭಕ್ತರಿಂದ ದಾಸೋಹ

ಸಿರವಾರ, ಫೆ.26-

ಸಂತ ಶಿಶುನಾಳ ಶರೀಫ ಅವರ ಜಾತ್ರೆಗೆ ಸಿರವಾರ ತಾಲೂಕು ಭಕ್ತರು ಕಳೆದ 10 ವರ್ಷದಿಂದ ದಾಸೋಹ ಸೇವೆ ಸಲ್ಲಿಸುತ್ತಿರುವುದರಿಂದ ಈ ವರ್ಷವೂ ಸಹ ಪಟ್ಟಣದಿಂದ ದಾಸೋಹಕ್ಕೆ ಬೇಕಾಗುವ ಆಹಾರದ ಸಾಮಗ್ರಿಗಳು ಹೊತ್ತುಕೊಂಡು, ಭಕ್ತರು ಶಿಶುನಾಳ ಗ್ರಾಮಕ್ಕೆ ತೆರಳಿದರು. ಈ ತಂಡದಲ್ಲಿ ಹನುಮೇಶ್ ತಾತ ವೆಂಕಟೇಶ ದೊರೆ, ಕಿರಣ್ ಸರೋದೆ, ಶಂಶೋದ್ದೀನ್, ಶಿವಪ್ಪ, ಅಂಬರೀಶ್ ನಾಯಕ್, ಶರಣಪ್ಪ, ಬಸವರಾಜ, ಬಸವಂತ ಜಾಟಗಲ್, ಅಂಬರೀಶ್ ಕುಂಬಾರ್, ವಿಜಯ್ ಮಹಾಂತೇಶ್, ಚನ್ನಪ್ಪ ಕೋರಿ ವೀರೇಂದ್ರ, ಲಕ್ಷ್ಮಣ ಮಲ್ಲಿದೊಡ್ಡಿ, ಹನುಮಂತ, ಶರೀಫ್ ಮಾರಾಟ, ಈಶ್ವರ್ ಭೋವಿ ಸೇರಿದಂತೆ ಅನೇಕರು ಇದ್ದರು.



ಸಾರ್ವಜನಿಕ ಶೌಚಾಲಯ ಜಾಗ ಅಕ್ರಮಣ, ತೆರವು ಗೋಳಿಸೆದಿದ್ದರೆ ತೀವ್ರ ಹೋರಾಟ : ಮಾನಸಯ್ಯ



ಕವಿತಾಳ,ಫೆ.26-

ಪಟ್ಟಣ ತಪ್ಪಲದೊಡ್ಡಿ ಅಗಸಿ ಅತ್ತಿರ ಸಾರ್ವಜನಿಕ ಶೌಚಾಲಯ ನಿರ್ಮಾಣಕ್ಕಾಗಿ ಸಂಘಟನೆ ಮುಖಂಡರು ಮತ್ತು ಮಹಿಳೆಯರು ಆಗ್ರಹಿಸಿದರು. ವಕ್ಫ್ ಬೋರ್ಡ್ ವತಿಯಿಂದ ತಮ್ಮ ಜಾಗ ಎಂದು ಹೇಳಿ ಈ ಹಿಂದೆ ಇದ್ದ ಸಾರ್ವಜನಿಕ ಶೌಚಾಲಯವನ್ನು ಹೊಡೆದಾಕಲಾಗಿತ್ತು. ಸರ್ವೇ ಮಾಡಿ ಸರ್ಕಾರಿ ಭೂಮಿ ಸರಕಾರಿ ಭೂಮಿ ಇದ್ದಲ್ಲಿ ಸಾರ್ವಜನಿಕ ಸೌಚಾಲಯವನ್ನು ನಿರ್ಮಾಣ ಮಾಡಿಕೊಡಿ ಎಂದು ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು ಸಹ ಯಾವುದೇ ಸ್ಪಂದನೆ ನೀಡುತ್ತಿಲ್ಲ ಎಂದು ಮಹಿಳೆಯರು ದೂರಿದರು. ಆರ್ ಮಾನಸಯ್ಯ ಮಾತನಾಡಿ ಸರ್ಕಾರಿ ಭೂಮಿ ಇದ್ದಲ್ಲಿ ಸಾರ್ವಜನಿಕ ಶೌಚಾಲಯ ನಿರ್ಮಾಣಕ್ಕೆ ಕ್ರಮ ಕೈಗೊಂಡು ಸಮಸ್ಯೆಯನ್ನು ಸರಿಪಡಿಸಬೇಕು ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿ ಜಸ್ಪಾಲ್ ಸಿಂಗ್ ಅವರಿಗೆ ಸೂಚಿಸಿದರು. ಒಂದು ವೇಳೆ ನಿರ್ಲಕ್ಷ ತೋರಿದರೆ ಮುಂದಿನ ದಿನಗಳಲ್ಲಿ ಉಗ್ರವಾದ ಹೋರಾಟ ಮಾಡಲಾಗುತ್ತದೆ ಎಂದರು. ಕರಿಯಪ್ಪ ಅಡ್ಡೆದ್, ಲಿಂಗಣ್ಣ ಯಡವಟ್, ಅಯ್ಯಪ್ಪ ನೀಲಗಲ್, ಅಮರೇಶ ಕಟ್ಟಿಮನಿ, ಮೌನೇಶ ಹಿರೇಕುರಬರು, ಹುಚ್ಚಪ್ಪ ವಡವಟ್ಟಿ, ಲಾಳೇಶ ನಾಯಕ, ಗಂಗಪ್ಪ ಹಟ್ಟಿ, ಯಂಕೋಬ ಹಟ್ಟಿ, ಈರಪ್ಪ ಕುರಕುಂದಿ, ನಾಗರಾಜ ಯಾದವ, ಮಂಜು ಕರೆಗೋಡಿ, ಜಯಸಿಂಗ್, ಗಂಗಪ್ಪ ಹಡಪದ ಮತ್ತು ಮಹಿಳೆಯರು ಇದ್ದರು.

ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆ, ಬಯ್ಯಾಪೂರ ಬಣಕ್ಕೆ ಭರ್ಜರಿ ಜಯ

ಲಿಂಗಸುಗೂರು,ಫೆ.26-

ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಚುನಾವಣೆಯಲ್ಲಿ ಬಯ್ಯಾ ಪೂರ ಬಣ ಭರ್ಜರಿ ಗೆಲುವು ಸಾಧಿಸಿ, ಹೂಲಗೇರಿ ಬಣಕ್ಕೆ ತೀವ್ರ ಸೋಲಿನ ರುಚಿ ತೋರಿಸಿದೆ. ಈ ಬಾರಿ ನಡೆದ ಚುನಾವಣೆ ಎರಡು ಬಣಗಳ ನಡುವೆ ತೀವ್ರ ಪೈಪೋಟಿ ನಡೆದಿದ್ದು, ಫಲಿತಾಂಶ ಪ್ರಕಟವಾದ ನಂತರ ಬಯ್ಯಾಪೂರ ಬಣದ ಕಾರ್ಯಕರ್ತರ ಸಂಭ್ರಮ ಆಚರಿಸಿದರು..

ಚುನಾವಣೆ ನಂತರ ಗ್ಯಾರಂಟಿ ಜಿಲ್ಲಾ ಯೋಜನೆ ಅಧ್ಯಕ್ಷ ಪಾಮಯ್ಯ ಮುರಾರಿ ತಿಳಿಸಿದ್ದಾರೆ.ಹೂಲಗೇರಿ ಬಣ ಬಿಜೆಪಿ ಬೆಂಬಲಿತ ಅಭ್ಯರ್ಥಿಯನ್ನು ನಿಲ್ಲಿಸಿ, ಕಾಂಗ್ರೆಸ್ ಅಭ್ಯರ್ಥಿಯನ್ನು ಸೋಲಿಸಲು ತಂತ್ರಗಾರಿಕೆ ರೂಪಿಸಿದ್ದರು. ಆದರೆ ಬಯ್ಯಾಪುರ ಮತ್ತು ಕಾರ್ಯಕರ್ತರು ನಿರಂತರವಾಗಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯ ಗೆಲುವಿಗೆ ಶ್ರಮಿಸಿದ್ದರ ಫಲವಾಗಿ ಇವತ್ತು ಬಯ್ಯಾಪೂರ ಬಣದ ಅಭ್ಯರ್ಥಿ ಭರ್ಜರಿ ಗೆಲುವು ಸಾಧಿಸಿದ್ದಾರೆ.

ಹೂಲಗೇರಿ ಬಯ್ಯಾಪುರ ಬಣಗಳ ಮಧ್ಯ ತೀವ್ರ ಪೈಪೋಟಿ : ಅಧ್ಯಕ್ಷ ಮತ್ತು ಉಪಾಧ್ಯಕ್ಷ ಚುನಾವಣೆ ದಿನಾಂಕ ಘೋಷಣೆಯಾದ ಕ್ಷಣದಿಂದಲೇ ಬಯ್ಯಾ ಪೂರ ಮತ್ತು ಹೂಲಗೇರಿ ಬಣಗಳ ನಡುವೆ ರಾಜಕೀಯ ಚಟುವಟಿಕೆಗಳು ಚುರುಕಾಗಿ ನಡೆಯುತ್ತಿದ್ದವು.ಎರಡು ಬಣಗಳು



ಚುನಾವಣೆಯನ್ನು ಪ್ರತಿಷ್ಠೆಯಾಗಿ ತಗೆದು ಕೊಂಡು ತಂತ್ರ-ಪ್ರತಿ ತಂತ್ರ ರೂಪಿಸಿದ್ದರು. ಆದರೆ ಇದರಲ್ಲಿ ಹೂಲಗೇರಿ ಬಣ ಶರಣಾಗತವಾದರೆ , ಬಯ್ಯಾಪೂರ ಬಣ ವಿಜಯಪತಾಕೆ ಹಾರಿಸಿತು.

ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ಸ್ಥಾನಕ್ಕೆ ಸಿದ್ದನಗೌಡ (ಹೂಲಗೇರಿ ಬಣ ಬೆಂಬಲಿತ) ಹಾಗೂ ಸಿದ್ರಾಮೇಶ (ಬಯ್ಯಾಪೂರ ಬಣ, ಕಾಂಗ್ರೆಸ್ ಬೆಂಬಲಿತ) ಇಬ್ಬರು ನಾಮಪತ್ರ ಸಲ್ಲಿಸಿದ್ದರು.ಮತಗಟ್ಟೆಯಲ್ಲಿ ಸಿದ್ರಾಮೇಶ 8 ಮತಗಳನ್ನು ಪಡೆದು ಗೆಲುವು ಸಾಧಿಸಿದರು, ಸಿದ್ದನಗೌಡ 7 ಮತಗಳೊಂದಿಗೆ

3ನೇ ಪುಟಕ್ಕೆ

ಎಸ್‌ಎಸ್‌ಎಲ್‌ಸಿ ಪರೀಕ್ಷೆ: ವಿದ್ಯಾರ್ಥಿಗಳು ಮೊಬೈಲ್, ಟಿವಿಯಿಂದ ದೂರವಿರಲು ಜಿ.ಪಂ ಸಿಇಓ ಈಶ್ವರ ಕುಮಾರ್ ಕಾಂದೂ ಸಲಹೆ

ರಾಯಚೂರು ಫೆ.26-

ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳು ಮೊಬೈಲ್ ಬಳಕೆ ಹಾಗೂ ಟಿವಿ ವೀಕ್ಷಣೆ ಮಾಡುವದನ್ನು ಕಡಿಮೆ ಮಾಡಿ ನಿಮ್ಮ ಸಮಯವನ್ನು ಓದುವದರ ಕಡೆ ಹೆಚ್ಚಿನ ಗಮನ ಹರಿಸಬೇಕೆಂದು ರಾಯಚೂರು ಜಿಲ್ಲಾ ಪಂಚಾಯತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ಸಲಹೆ ನೀಡಿದ್ದಾರೆ.



ಹತ್ತನೇ ತರಗತಿಯು ವಿದ್ಯಾರ್ಥಿಯ ಜೀವನದ ಒಂದು ಪ್ರಮುಖ ಘಟ್ಟ. ಈ ಸಮಯದಲ್ಲಿ ಮಗುವಿನ ಮೇಲೆ ಕೇವಲ ಶಿಕ್ಷಕರ ಜವಾಬ್ದಾರಿಯಷ್ಟೇ ಅಲ್ಲ. ಪೋಷಕರಾದ ನಿಮ್ಮ ಪ್ರೋತ್ಸಾ ಹ ಮತ್ತು ಬೆಂಬಲ ಅತಿ ಮುಖ್ಯವಾಗಿದೆ.

ನಮ್ಮ ರಾಯಚೂರು ಜಿಲ್ಲೆಯ ಶೈಕ್ಷಣಿಕ ಪ್ರಗತಿಯಲ್ಲಿ ನಿಮ್ಮ ಮಗುವಿನ ಪಾತ್ರ ದೊಡ್ಡದಿದೆ. ಈ ಪರೀಕ್ಷಾ ಸಂದರ್ಭದಲ್ಲಿ ನಿಮ್ಮ ಮಗುವಿಗೆ ಪೂರಕವಾದ ವಾತಾವರಣ ಸೃಷ್ಟಿಸಬೇಕಾಗಿದೆ.

ಪರೀಕ್ಷೆಯು ಒಂದು ಭಯದ ವಿಷಯವಾಗಬಾರದು. ಮಗುವಿನ ಮೇಲೆ ಹೆಚ್ಚಿನ ಅಂಕಗಳ ಒತ್ತಡ ಹೇರಬೇಡಿ. ಬದಲಿಗೆ. ನೀನು ನಿನ್ನ ಅತ್ಯುತ್ತಮ ಪ್ರಯತ್ನ ಮಾಡು, ನಾವು ನಿನ್ನ ಜೊತೆಗಿದ್ದೇವೆ ಎಂಬ ಭರವಸೆಯನ್ನು ನೀಡಬೇಕು.

ಮನೆಯಲ್ಲಿ ಪೂರಕ ವಾತಾವರಣ ಸೃಷ್ಟಿಸಬೇಕು. ಮಗು ಓದುತ್ತಿರುವಾಗ ಟಿವಿ ಅಥವಾ ಮೊಬೈಲ್‌ಗಳ ಬಳಕೆಯನ್ನು ಕಡಿಮೆ ಮಾಡಬೇಕು. ಏಕಾಗ್ರತೆಯಿಂದ ಓದಲು ಬೇಕಾದ ಸ್ಥಳಾವಕಾಶ ಮಾಡಿಕೊಡಬೇಕು.

ಪರೀಕ್ಷೆಯ ಸಮಯದಲ್ಲಿ ಮಗುವಿಗೆ ಪೌಷ್ಠಿಕ ಆಹಾರ ಮತ್ತು ಸಾಕಷ್ಟು ಕುಡಿಯುವ ನೀರನ್ನು ನೀಡಿ. ಮಗು ಕನಿಷ್ಠ 6-7 ಗಂಟೆಗಳ ಕಾಲ ಚೆನ್ನಾಗಿ ನಿದ್ರಿಸುತ್ತಿದೆಯೇ ಎಂದು ಖಚಿತಪಡಿಸಿಕೊಳ್ಳಿ. ನಿದ್ರೆ ಕಡಿಮೆಯಾದರೆ ಮರೆವು ಉಂಟಾಗುವ ಸಾಧ್ಯತೆ ಇರುತ್ತದೆ.

ಮಗು ನಿಗದಿತ ಸಮಯದಲ್ಲಿ ಓದುವಂತೆ ಮತ್ತು ನಡುವೆ ಅಲ್ಪ ವಿರಾಮ ತೆಗೆದುಕೊಳ್ಳುವಂತೆ ಪ್ರೋತ್ಸಾ ಹಿಸಿ. ನಿರಂತರವಾಗಿ ಓದುವುದಕ್ಕಿಂತ, ಅರ್ಥ ಮಾಡಿಕೊಂಡು ಓದುವುದು ಹೆಚ್ಚು ಫಲಪ್ರದ.

ಇಂದಿನ ದಿನಗಳಲ್ಲಿ ಮೊಬೈಲ್ ಮತ್ತು ಟಿವಿಗಳು ವಿದ್ಯಾರ್ಥಿಗಳ ಏಕಾಗ್ರತೆಗೆ ದೊಡ್ಡ ಅಡ್ಡಿಯಾಗಿವೆ. ಆದ್ದರಿಂದ ಪರೀಕ್ಷೆಯ

3ನೇ ಪುಟಕ್ಕೆ

ಗ್ಯಾರಂಟಿ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿಸಬೇಕು : ಅಧ್ಯಕ್ಷೆ:-ಚಂದ್ರಿಕಾ ಪರಮೇಶ್ವರ

ಕಲಬುರಗಿ,ಫೆ.26-

ಜಿಲ್ಲೆಯ ಹಳ್ಳಿ ಹಳ್ಳಿಗೂ ಹೋಗಿ, ಗ್ರಾಮ ಪಂಚಾಯತ್ ಮಟ್ಟದಲ್ಲಿ ಗ್ರಾಮ ಸಭೆಗಳನ್ನು ಮಾಡಿ ಫಲಾನುಭವಿಗಳಿಗೆ ಗ್ಯಾರೆಂಟಿ ಯೋಜನೆಗಳ ಬಗ್ಗೆ ಮಾಹಿತಿನೀಡಬೇಕು. ಸಮಾಜದ ಕಟ್ಟಕಡೆಯ ವ್ಯಕ್ತಿಗಳಿಗೂ ಯೋಜನೆಗಳು ತಲುಪಬೇಕು ಎಂದು ಜಿಲ್ಲಾ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ ಸೂಚನೆ ನೀಡಿದರು.



ಬುಧವಾರ ನಗರದ ಜಿಲ್ಲಾ ಪಂಚಾಯತ ಹೊಸ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅವರುಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಕುರಿತು ಮಾತನಾಡಿದ ಅವರು ಫಲಾನುಭವಿಗಳು ನಮ್ಮ ಬಳಿ ಬರೋಕ್ಕಿಂತ ಮೊದಲು ನಾವು ಅವರ ಬಳಿ ಹೋಗಿ ಸಮಸ್ಯೆಗಳನ್ನು ಪರಿಹರಿಸಬೇಕು. ತಾಲೂಕು ಮತ್ತು ಗ್ರಾಮೀಣ ಮಟ್ಟದಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಮಹಿಳೆಯರಿಗೆ ಪಂಚ ಗ್ಯಾರೆಂಟಿ ಯೋಜನೆಗಳ ಕುರಿತು ಮಾಹಿತಿ ನೀಡಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಗೃಹಲಕ್ಷ್ಮೀ ಯೋಜನೆಗಳ ಬಗ್ಗೆ ಹಲವಾರು ಗೊಂದಲಗಳಿವೆ ಮುಂದಿನ ದಿನಗಳಲ್ಲಿ ಈ ಗೊಂದಲಗಳು ಬಗೆ ಹರಿಯದಿದ್ದಲ್ಲಿ ನಿಮ್ಮ ಮೇಲೆ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಬೇಕಾಗುತ್ತದೆ. ಯೋಜನೆಗಳ ಸಂಪೂರ್ಣ ಮಾಹಿತಿ ತಗೆದು ಕೊಂಡು ಸಭೆಗೆ ಹಾಜರಾಗಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಬಡ ಜನರ ಆರ್ಥಿಕ ಅಭಿವೃದ್ಧಿಗೆ ಸಹಕಾರಿಯಾಗಿದ್ದು, ಪ್ರತಿ ಹಂತದಲು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ಅಧಿಕಾರ ದುರುಪಯೋಗ ಮಾಡಿಕೊಳ್ಳದೆ. ಅರ್ಹ ಫಲಾನುಭವಿಗಳಿಗೆ ಯೋಜನೆಗಳು ತಲುಪುವಂತೆ ಮಾಡಬೇಕು ಎಂದರು.

ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಶಕ್ತಿ ಯೋಜನೆ, ಗೃಹಜ್ಯೋತಿ, ಗೃಹಲಕ್ಷ್ಮೀ ಹಾಗೂ ಯುವನಿಧಿ ಯೋಜನೆಗಳ ಎಷ್ಟು ಫಲಾನುಭವಿಗಳು ಯೋಜನೆಗಳ ಸದುಪಯೋಗಪಡಿಸಿಕೊಳ್ಳುತ್ತಿದ್ದಾರೆ ಎಂದು ತಾಲ್ಲೂಕುವಾರು ಮಾಹಿತಿ ನೀಡಬೇಕು ಎಂದರು.

ಜಿಲ್ಲಾ ಪಂಚಾಯತ ಸಿ.ಇ.ಓ ಭಂವರ ಸಿಂಗ್ ಮೀನಾ ಅವರು ಮಾತನಾಡಿ, ಮಾರ್ಚ್ ಒಳಗಡೆ ಯುವನಿಧಿ ಯೋಜನೆಯ ತಾಲೂಕುವಾರು ಮಾಹಿತಿ ನೀಡಬೇಕು. ಜಿಲ್ಲೆಯ ಎಲ್ಲಾ ತಾಲೂಕಿನ ಪದವಿ, ಡಿಪ್ಲೋಮೋ ಕಾಲೇಜುಗಳಿಗೆ ಭೇಟಿನೀಡಿ ಯುವನಿಧಿ ಯೋಜನೆಯ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ರೇಷನ ಕಾರ್ಡ, ಆಧಾರ ಕಾರ್ಡ, ತಿದ್ದುಪಡಿಯಂತಹ ಇ.ಕೆ.ವೈಸಿ ತಾಂತ್ರಿಕ ಸಮಸ್ಯೆಗಳನ್ನು ಸರಿಪಡಿಸಿ ಪ್ರತಿಯೊಬ್ಬ ಮಹಿಳೆಯರು ಈ ಯೋಜನೆಯ ಲಾಭವನ್ನು ಪಡೆದುಕೊಳ್ಳಬೇಕೆಂದರು. ಎಸ್.ಎಸ್.ಎಲ್.ಸಿ, ಪಿ.ಯು.ಸಿ ಪರೀಕ್ಷೆಗಳು ಇರುವುದರಿಂದ ಸರಿಯಾಗಿ ವಿದ್ಯುತ್ ನೀಡಬೇಕು. ಸಾರ್ವಜನಿಕರು ಸಮಸ್ಯೆ ಎಂದು ಸಹಾಯವಾಣಿಗೆ ಕರೆಮಾಡಿದ್ದಾಗ ಆಡುಭಾಷೆಯಲ್ಲಿ ಮಾತನಾಡಬೇಕು ಸಾರ್ವಜನಿಕರಿಗೆ ಸಮಸ್ಯೆ ಬಗ್ಗೆ ಅರ್ಥಮಾಡಿಕೊಳ್ಳಲು ಸಹಕಾರಿಯಾಗುತ್ತದೆ. ಹಾಗೆ ಸಹಾಯವಾಣಿಯಲ್ಲಿ ಮಾತನಾಡಲು ಟ್ರೈನಿಂಗ್ ನೀಡಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷ ನರಸಿಂಹಲು ಕುಂಬಾರ ಅವರು ಮಾತನಾಡಿ, ಬಡವರಿಗೆ ಗ್ಯಾರಂಟಿ ಯೋಜನೆಗಳ ಸೌಲಭ್ಯ ತಲುಪಿಸುವಲ್ಲಿ ವಿಳಂಬವಾಗಬಾರದು. ಸೌಲಭ್ಯಗಳನ್ನು ನಿಗಧಿತ ಅವದಿಯಲ್ಲಿಯೇ ತಲುಪಿಸುವಂತಾಗಬೇಕು. ಎಂದರು.

ಗೃಹಲಕ್ಷ್ಮಿ ಯೋಜನೆ ನೊಂದಣಿ:-

ಜಿಲ್ಲೆಯಲ್ಲಿ 5,89,105 ಪಡಿತರ ಚೀಟಿಗಳ ಪೈಕಿ 5,85,656 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದಾರೆ. ಗೃಹಲಕ್ಷ್ಮಿ ಯೋಜನೆಗೆ ಸಂಬಂಧಿಸಿದ ಯಾವುದೇ ದೂರು, ಮಾಹಿತಿಗಾಗಿ ಸಾರ್ವಜನಿಕರು ಉಚಿತ ಸಹಾಯವಾಣಿ ಸಂಖ್ಯೆ 181 ಕ್ಕೆ ಕರೆ ಮಾಡಬಹುದು.

ಅನ್ನಭಾಗ್ಯ ಯೋಜನೆ:-

ಹಸಿವು ಮುಕ್ತ ಜಿಲ್ಲೆಯತ್ತ ಹೆಜ್ಜೆ ಪಡಿತರ ಚೀಟಿ ಹೊಂದಿರುವ ಕುಟುಂಬಗಳಿಗೆ ನೇರ ನಗದು ವರ್ಗಾವಣೆ ಮತ್ತು ಅಕ್ಕಿ ವಿತರಣೆ ಸುಗಮವಾಗಿ ನಡೆಯುತ್ತಿದೆ. ಏಪ್ರಿಲ್ 2024 ರಿಂದ ಡಿಸೆಂಬರ್ 2024 ರವರೆಗೆ ಒಟ್ಟು 259.69 ಕೋಟಿ ರೂ.ಗಳನ್ನು ಫಲಾನುಭವಿಗಳ ಖಾತೆಗೆ ನೇರ ನಗದು ವರ್ಗಾವಣೆ ಮೂಲಕ ಜಮೆ ಮಾಡಲಾಗಿದೆ. ಫೆಬ್ರವರಿ 2025 ರಿಂದ ಸರ್ಕಾರವು ಡಿಬಿಟಿ ಬದಲಿಗೆ ಪ್ರತಿ ಸದಸ್ಯರಿಗೆ 5 ಕೆಜಿ ಹೆಚ್ಚುವರಿ ಅಕ್ಕಿಯನ್ನು ವಿತರಿಸುತ್ತಿದೆ. ಡಿಸೆಂಬರ್ 2025 ರವರೆಗೆ ಸುಮಾರು 11 ಲಕ್ಷ ಟನ್‌ಗಳಿಗೂ ಅಧಿಕ ಆಹಾರಧಾನ್ಯವನ್ನು ಹಂಚಿಕೆ ಮಾಡಲಾಗಿದೆ.

ಗೃಹಜ್ಯೋತಿ ಯೋಜನೆ ನೊಂದಣಿ:-

ಮನೆ ಮನೆಗೆ ಉಚಿತ ಬೆಳಕು, ಜಿಲ್ಲೆಯ ಸಾವಿರಾರು ಕುಟುಂಬಗಳು ಉಚಿತ ವಿದ್ಯುತ್ ಸೌಲಭ್ಯವನ್ನು ಬಳಸಿಕೊಳ್ಳುತ್ತಿವೆ. ಜನವರಿ 31, 2026 ರ ಅಂಕಿಅಂಶದಂತೆ ಜಿಲ್ಲೆಯಲ್ಲಿ 5,59,108 ಗ್ರಾಹಕರು ಗೃಹಜ್ಯೋತಿ ಯೋಜನೆಗೆ ನೋಂದಾಯಿಸಿಕೊಂಡಿದ್ದಾರೆ. ಆಗಸ್ಟ್ 2023 ರಿಂದ ಜನವರಿ 2024 ರ ಅವಧಿಯಲ್ಲಿ ಸುಮಾರು 742.79 ಕೋಟಿ ರೂ.ಗಳ ಸಬ್ಸಿಡಿ ಮೊತ್ತವನ್ನು ಒದಗಿಸಲಾಗಿದೆ. ಜಿಲ್ಲೆಯಲ್ಲಿ ಶೇ. 96 ರಷ್ಟು ನೋಂದಣಿ ಪ್ರಕ್ರಿಯೆ ಪೂರ್ಣಗೊಂಡಿದೆ.

ಯುವನಿಧಿ ಯೋಜನೆ ನೊಂದಣಿ:-

ನಿರುದ್ಯೋಗಿ ಯುವಕರಿಗೆ ಆಸರೆ, ಪದವಿ ಮತ್ತು ಡಿಪ್ಲೊಮಾ ಮುಗಿಸಿ ಉದ್ಯೋಗದ ಹುಡುಕಾಟದಲ್ಲಿರುವ ಯುವಕರಿಗೆ ಈ ಯೋಜನೆ ಆರ್ಥಿಕ ಬೆಂಬಲ ನೀಡುತ್ತಿದೆ. ಡಿಸೆಂಬರ್ 2025 ರ ಅಂತ್ಯದ ವೇಳೆಗೆ ಜಿಲ್ಲೆಯಲ್ಲಿ 29,230 ಯುವಕರು ನೋಂದಾಯಿಸಿಕೊಂಡಿದ್ದಾರೆ. ಈ ಯೋಜನೆಯಡಿ ಇದುವರೆಗೆ ಒಟ್ಟು 67.03 ಕೋಟಿ ರೂ.ಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಶಕ್ತಿ ಯೋಜನೆಯಡಿ ಮಹಿಳೆಯರ ಪ್ರಯಾಣ:- ಜಿಲ್ಲೆಯಲ್ಲಿ ಜೂನ್ 2023 ರಿಂದ ಇಲ್ಲಿಯವರೆಗೆ 19 ಕೋಟಿ ಮಹಿಳೆಯರೂ ಪ್ರಯಾಣಿಸಿದ್ದಾರೆ. ಸರ್ಕಾರದಿಂದ 70 ರಷ್ಟು ಅನುದಾನ ಬರುತ್ತಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷ ವಿಜಯಕುಮಾರ್ ಕಟ್ಟಿಮನಿ, ನಿರ್ಮಲಾ ಬಗಲಿ, ಸುರೇಶ್ ತಿಪ್ಪಶೆಟ್ಟಿ, ಗ್ಯಾರೆಂಟಿ ಯೋಜನೆಗಳ ಅನುಷ್ಠಾನದ ತಾಲೂಕು ಮಟ್ಟದ ಅಧ್ಯಕ್ಷರು ಮತ್ತು ಸದಸ್ಯರು ಉಪಸ್ಥಿತರಿದ್ದರು.

ಮಾರ್ಚ್ 1 ರಂದು ರೇಣುಕಾಚಾರ್ಯ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲು ನಿರ್ಧಾರ

ಕಲಬುರಗಿ: ಫೆ.26-



ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶ್ರೀ. ರೇಣುಕಾಚಾರ್ಯ ಜಯಂತಿಯನ್ನು ಮಾರ್ಚ್ 1 ರಂದು ವಿಜೃಂಭಣೆಯಿಂದ ಆಚರಿಸಲು ಜಿಲ್ಲಾಧಿಕಾರಿ ಕಚೇರಿಯ ಸಹಾಯಕರಾದ ಶಿವಪ್ರಭು ಹಿರೇಮಠ ಅವರ ಸಭೆಯಲ್ಲಿ ನಿರ್ಧರಿಸಲಾಯಿತು.

ಇತ್ತೀಚಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಇದೇ ಮಾರ್ಚ 1 ರಂದು ರವಿವಾರ ಮಧ್ಯಾಹ್ನ 1 ಗಂಟೆಗೆ ಕಲಬುರಗಿ ನಗರದ ಡಾ. ಎಸ್.ಎಂ ಪಂಡಿತ ರಂಗಮಂದಿರದಲ್ಲಿ ಶ್ರೀ ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮ ಜರುಗಲಿದ್ದು, ಈ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು.

ಅಂದು ಬೆಳಿಗ್ಗೆ 9 ಗಂಟೆಗೆ ಕಡ್ಡಾಯವಾಗಿ ಎಲ್ಲಾ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸರ್ಕಾರಿ ಕಚೇರಿಗಳಲ್ಲಿ, ಶಾಲಾ-ಕಾಲೇಜುಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು. ಸಭೆಯಲ್ಲಿ ನುರಿತ ಉಪನ್ಯಾಸಕರನ್ನು ಸಹ ಆಹ್ವಾನಿಸಲು ತೀರ್ಮಾನಿಸಲಾಯಿತು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದರ ಜೊತೆಗೆ ಸ್ವಚ್ಚತೆ ಮತ್ತು ನೈರ್ಮಲ್ಯ ಕಾಪಾಡಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಶರಣಕುಮಾರ ಮೋದಿ ಜಿಲ್ಲಾಧ್ಯಕ್ಷರು ಅಖಿಲ್ ಭಾರತ ವೀರಶೈವ ಲಿಂಗಾಯತ್ ಮಹಾಸಭಾ ಕಲಬುರಗಿರವರು ನೇತೃತ್ವವಹಿಸುವರು. ಜಯಂತಿ ಸಮಿತಿ ಅಧ್ಯಕ್ಷರಾಗಿ ಬಸವರಾಜ ಮಠಪತಿ ಕಮಲಾಪೂರ ಹಾಗೂ ನಾಗಲಿಂಗಯ್ಯ ಮಠಪತಿ ಕಾರ್ಯಕ್ರಮದ ನಿರೂಪಕರನ್ನಾಗಿ ಆಯ್ಕೆ ಮಾಡಲಾಯಿತು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ಜಗದೀಶ್ವರಿ ನಾಶಿ ಅವರು ಪ್ರೋಟೋಕಾಲ್ ಪ್ರಕಾರ ಕಾರ್ಯಕ್ರಮ ಪತ್ರಿಕಾ ಆಮಂತ್ರಣ ಮುದ್ರಿಸಲಾಗುವುದು. ನಾಡಗೀತೆ, ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಶಿವಕುಮಾರ ಹಿರೇಮಠ, ರುದ್ರಮುನಿ ಮಠಪತಿ, ಸಾಗರ ಹಿರೇಮಠ, ಸುನೀತಾ, ಕವಿತಾ, ಅನ್ನಪೂರ್ಣ, ಆನಂದ, ವಿರೇಶ ಹಾಗೂ ರವಿಕುಮಾರ ಇತರರು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿಗಳಿಂದ ಬೆಲ್ಲ ತಯಾರಿಕಾ ಘಟಕ ವೀಕ್ಷಣೆ

ಕಲಬುರಗಿ,ಫೆ.26-



ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮಂಗಳವಾರ ಆಳಂದ ತಾಲೂಕಾ ಪ್ರವಾಸ ಕೈಗೊಂಡಿದ್ದು, ತಾಲೂಕಿನ ಗೋಳಾ ಗ್ರಾಮಕ್ಕೆ ಭೇಟಿ ನಿಡಿ ಬೆಲ್ಲ ತಯಾರಿಸುವ ಘಟಕಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಬೆಲ್ಲ ತಯಾರಿಕಾ ಘಟಕಕ್ಕೆ ಭೇಟಿ ತಯಾರಿಕೆ ವಿಧಾನಗಳನ್ನು ಕುರಿತು ರೈತರಿಂದ ಮಾಹಿತಿ ಪಡೆದುಕೊಂಡರು. ನಂತರ ಕಲಬುರಗಿ ತಾಲೂಕಿನ ಕಪನೂರ ಗ್ರಾಮಕ್ಕೆ ಭೇಟಿ ನೀಡಿ ಭೂ ಪರಿವರ್ತನೆ ಕೋರಿ ಬಂದಿರುವ ಅರ್ಜಿಗಳನ್ನು ಸ್ಥಳ ಪರಿಶೀಲನೆ ಮಾಡಿದರು. ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಇದ್ದರು.

ನೌಬಾದ್‌ನ ಹತ್ತಿರದ ಅಲೆಮಾರಿ ಜನಾಂಗವನ್ನು ಸಧ್ಯ ಒಕ್ಕಲೆಬ್ಬಿಸದಂತೆ ಸೂಚನೆ-ಡಾ.ಮೂರ್ತಿ ಎಲ್.



ಬೀದರ, ಫೆ.26-

ಕಳೆದ ಹಲವಾರು ವರ್ಷಗಳಿಂದ ನೌಬಾದ್ ಸುತ್ತಲಿನ ವಿವಿಧ ಪ್ರದೇಶಗಳಲ್ಲಿ ತಾತ್ಕಾಲಿಕ ಗುಡಿಸಲು ನಿರ್ಮಿಸಿಕೊಂಡು ವಾಸಿಸುತ್ತಿರುವ ಅಲೆಮಾರಿ ಜನಾಂಗದವರನ್ನು ಸದ್ಯಕ್ಕೆ ಒಕ್ಕಲೆಬ್ಬಿಸದಂತೆ ಜಿಲ್ಲಾಡಳಿತಕ್ಕೆ ಸೂಚಿಸುವುದಾಗಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಆಯೋಗದ ಅಧ್ಯಕ್ಷ ಡಾ.ಮೂರ್ತಿ ಎಲ್.ತಿಳಿಸಿದರು.

ಇಂದು ಅವರು ನೌಬಾದ್ ಹತ್ತಿರ ಚೌಳಿ ಕಮಾನ್ ಹತ್ತಿರದ ಪ್ರದೇಶಗಳಲ್ಲಿ ತಾತ್ಕಾಲಿಕವಾಗಿ ಗುಡಿಸಲು ನಿರ್ಮಿಸಿಕೊಂಡು ವಾಸಿಸುತ್ತಿರುವ ಸಿಂಧೋಳ/ಮಾಂಗರವಾಡಿ ಅಲೆಮಾರಿ ಜನಾಂಗದವರನ್ನು ಭೇಟಿ ಮಾಡಿ ಮಾತನಾಡಿದರು.

ತಾವು ಸಹ ಈ ಕೆಳ ಸಮುದಾಯದಿಂದ ಬೆಳೆದಿದ್ದು, ಈ ಜನಾಂಗದವರ ಸ್ಥಿತಿ ತೀರ ಚಿಂತಾಜನಕವಾಗಿದೆ. ವಸತಿ, ಶಿಕ್ಷಣ, ಉದ್ಯೋಗ ವಿದ್ಯುತ್ ಹಾಗೂ ಶೌಚಾಲಯ ವಂಚಿತರಾಗಿರುವ ಈ ಜನಾಂಗಕ್ಕೆ ಖಾಯಂ ವಸತಿ ದೊರಕಿಸುವ ನಿಟ್ಟಿನಲ್ಲಿ ಸರಕಾರದ ಹಾಗೂ ಸಮಾಜ ಕಲ್ಯಾಣ ಸಚಿವರಾದ ಡಾ.ಹೆಚ್.ಸಿ. ಮಹಾದೇವಪ್ಪ ಅವರ ಗಮನಕ್ಕೆ ವರದಿ ಸಲ್ಲಿಸುವುದಾಗಿ ತಿಳಿಸಿದರು. ಸಧ್ಯ 80 ಕುಟುಂಬಗಳು ನೌಬಾದ್‌ನ ಕೆಐಡಿಬಿ ಸರಕಾರಿ ಸ್ಥಳದಲ್ಲಿ ತಾತ್ಕಾಲಿಕವಾಗಿ ಗುಡಿಸಲು ನಿರ್ಮಿಸಿಕೊಂಡು ವಾಸವಾಗಿದ್ದಾರೆ. ಇವರಿಗೆ 2 ಎಕರೆ ಪ್ರದೇಶದಲ್ಲಿ ಖಾಯಂ ವಸತಿ ನಿರ್ಮಿಸಲು ಬೇಡಿಕೆಯಿದ್ದು, ಬೀದರ ಜಿಲ್ಲಾಡಳಿತ ಹಾಗೂ ಸರಕಾರದ ಗಮನಕ್ಕೆ ತರಲಾಗುವುದೆಂದು ತಿಳಿಸಿದರು.

ಡಾ.ಮೂರ್ತಿ ಅವರು ಇಂದು ನಗರದ ವಿವಿಧ ವಸತಿ ನಿಲಯಗಳಿಗೆ ಭೇಟಿ ನೀಡಿ ವ್ಯವಸ್ಥೆಯನ್ನು ಪರಿಶೀಲಿಸಿ ಯಾವುದೇ ಸಮಸ್ಯೆಯಾಗದಂತೆ ಜವಾಬ್ದಾರಿ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಇದೇ ವೇಳೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಆಯೋಗದ ಅಧ್ಯಕ್ಷ ಡಾ.ಮೂರ್ತಿ ಎಲ್. ಅವರು ರಾಜಗೊಂಡ ಕಾಲೋನಿಗೆ ಭೇಟಿ ನೀಡಿ ಸಮಸ್ಯೆ ಆಲಿಸಿದರು. ಈ ಸಂದರ್ಭದಲ್ಲಿ ಮಾಜಿ ಎಂ.ಎಲ್.ಸಿ. ಅರವಿಂದ ಕುಮಾರ ಅರಳಿ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಯೋಗೇಶ ಸೇರಿದಂತೆ ಅಲೆಮಾರಿ ಸಮಾಜದ ಮುಖಂಡರು, ಇನ್ನಿತರರು ಉಪಸ್ಥಿತರಿದ್ದರು.

ಕೋರ್ಟ್ ಮಾರ್ಶಲ್ ನಾಟಕ ಪ್ರದರ್ಶನ: ಅಧಿಕಾರದ ಹಪಾಹಪಿ, ಜಾತಿ ವ್ಯವಸ್ಥೆ ಅನಾವರಣ

ಕಲಬುರಗಿ,ಫೆ.26-



ಸ್ವಾತಂತ್ರ್ಯ ಪಡೆದು ಅಮೃತ ಮಹೋತ್ಸವ ಆಚರಿಸುವಂತಹ ಸಂದರ್ಭದಲ್ಲಿ ಇನ್ನು ಅಧಿಕಾರದ ಹಪಾಹಪಿ, ಜಾತಿ ವ್ಯವಸ್ಥೆ ಆಡಳಿತ ವ್ಯವಸ್ಥೆಯಲ್ಲಿ ಇನ್ನು ಬೇರೂರಿರುವ ಕುರಿತು ಕೋರ್ಟ್ ಮಾರ್ಶಲ್ ನಾಟಕ ಅನಾವರಣಗೊಳಿಸಿತು.

ಕಲಬುರಗಿ ನಾಟಕೋತ್ಸವ ಅಂಗವಾಗಿ ಇಲ್ಲಿನ ಡಾ.ಎಸ್.ಎಂ.ಪಂಡಿತ್ ರಂಗಮಂದಿರದಲ್ಲಿ ಬುಧವಾರ ಸಂಜೆ ಜರುಗಿದ ದೀಪ್ ಸ್ವದೇಶಿ ಅವರು ರಚಿಸಿದ ಅಶಿಷ್ ರಾಣಾ ನಿರ್ದೇಶನದ ಕೋರ್ಟ್ ಮಾರ್ಶಲ್ ನಾಟಕ ಬೆಂಗಳೂರಿನ ಥಿಯೇಟರ್ನಾಮಾ ತಂಡ ತುಂಬಾ ಶಿಸ್ತುಬದ್ಧವಾಗಿ ಪ್ರದರ್ಶನ ನೀಡಿತ್ತು. ಅತ್ಯಂತ ವಿಧೇಯನಾಗಿದ್ದ ಸೈನಿಕನೊಬ್ಬ ಅಪರಾಧವೊಂದನ್ನು ಮಾಡಿ ಸಿಕ್ಕಿಬಿದ್ದಾಗ ಇದರ ತನಿಖೆಗಾಗಿ ಸೇನೆಯು 'ಕೋರ್ಟ್ ಮಾರ್ಶಲ್'ಗೆ ಆದೇಶಿಸಿರುತ್ತದೆ. ಇದರ ಸುತ್ತವೆ ಸಂಪೂರ್ಣ ನಾಟಕ ಆವರಿಸಿದೆ.

ಜಾತಿ ವ್ಯವಸ್ಥೆ ಆಳವಾಗಿ ಬೇರೂರಿರುವ ಸರ್ಕಾರಿ ಆಡಳಿತ ಕಚೇರಿಯೊಂದರ ಹಿನ್ನೆಲೆಯಲ್ಲಿ ಈ ನಾಟಕ ರಚಿಸಲಾಗಿದೆ. ಭಾರತೀಯ ಸಂವಿಧಾನದ ಅತಿದೊಡ್ಡ ವಿರೋಧಾಭಾಸಗಳಲ್ಲಿ ಒಂದನ್ನು ಇದು ಬಿಚ್ಚಿಡುತ್ತದೆ-ಅಸ್ಪೃಶ್ಯತೆಯನ್ನು ನಿಷೇಧಿಸಿ ಅಪರಾಧವೆಂದು ಪರಿಗಣಿಸಲಾಗಿದ್ದರೂ, ಜಾತಿ ಪದ್ಧತಿಯು ಇಂದಿಗೂ ಸಮಾಜದಲ್ಲಿ ಜೀವಂತವಿರುವುದನ್ನು ನಾಟಕ ಎಳೆ-ಎಳೆಯಾಗಿ ಬಿಚ್ಚಿಟ್ಟಿತ್ತು.

ಡಾ. ಅಂಬೇಡ್ಕರ್ ಅವರ ತತ್ತ್ವ ಶಾಸ್ತ್ರವನ್ನು ಅನುಸರಿಸುವ ನಮ್ಮ ಪ್ರಯತ್ನಗಳ ನಡುವೆಯೂ, ವಾಸ್ತವವು ಬೇರೆಯದೇ ಕಥೆಯನ್ನು ಹೇಳುತ್ತದೆ. ಕಾಲಾಂತರದಲ್ಲಿ ತಾರತಮ್ಯದ ರಚನೆಗಳು ಕೇವಲ ಹೊಸ ರೂಪಗಳನ್ನು ಪಡೆದುಕೊಳ್ಳುತ್ತವೆಯೇ ಹೊರತು, ಮೂಲಭೂತವಾಗಿ ಏನೂ ಬದಲಾಗುವುದಿಲ್ಲ ಎಂಬುದನ್ನು ನಾಟಕ ನೆನಪಿಸಿತ್ತು.

ಆಗಸ್ಟ್‌ನಲ್ಲಿ ಕ್ಯಾನ್ಸರ್, ಅಕ್ಟೋಬರ್‌ನಲ್ಲಿ ತಾಯಿ-ಮಕ್ಕಳ ಆಸ್ಪತ್ರೆ ಕಾಮಗಾರಿ ಪೂರ್ಣ -ಶರಣಪ್ರಕಾಶ ಪಾಟೀಲ

ಕಲಬುರಗಿ,ಫೆ.26-

ನಗರದ ಜಿಮ್ ಆಸ್ಪತ್ರೆ ಆವರಣದಲ್ಲಿ ಸಮಾರ 76 ಕೋಟಿ ರೂ ವೆಚ್ಚದಲ್ಲಿ ನಿರ್ಮಾಣವಾಗತ್ತಿರುವ 210 ಹಾಸಿಗೆಯ ಕ್ಯಾನ್ಸರ್ ಆಸ್ಪತ್ರೆಯ ವಿಸ್ತರಣಾ ಕಟ್ಟಡ ಬರವ ಆಗಸ್ಟ್ ಮಾಹೆಗೆ ಮತ್ತು 92 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ 200 ಹಾಸಿಗೆಯ ತಾಯಿ-ಮಕ್ಕಳ ಆಸ್ಪತ್ರೆ ಬರುವ ಅಕ್ಟೋಬರ್ ಮಾಹೆಗೆ ಕಟ್ಟಡ ಕಾಮಗಾರಿ ಪೂರ್ಣಗೊಳ್ಳಲಿವೆ ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ತಿಳಿಸಿದರು.



ಬುಧವಾರ ಜಿಮ್ಸ್ ಆಸ್ಪತ್ರೆ ಆವರಣದಲ್ಲಿ ನಿರ್ಮಿಸಲಾಗುತ್ತಿರುವ ಕ್ಯಾನ್ಸರ್ ಆಸ್ಪತ್ರೆ, ತಾಯಿ-ಮಕ್ಕಳ ಆಸ್ಪತ್ರೆ, ಸುಟ್ಟು ಗಾಯಗಳ ಘಟಕ, ತೀವ್ರ ನಿಗಾ ಘಟಕ ಕಟ್ಟಡ ಕಾಮಗಾರಿಗಳನ್ನು ಪರಿಶೀಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಮಗಾರಿ ಗುಣಮಟ್ಟ ಕಾಯ್ದುಕೊಳ್ಳುವುದರ ಜೊತೆಗೆ ಕಾಲಾವಧಿ ವರೆಗೆ ಕಾಯದೆ ಸಾಧ್ಯವಾದಷ್ಟು ಬೇಗ ಕಾಮಗಾರಿ ಮುಗಿಸಬೇಕು ಎಂದ ಗುತ್ತಿಗೆದಾರನಿಗೆ ಸೂಚನೆ ನೀಡಲಾಗಿದೆ ಎಂದರಲ್ಲದೆ ಈಗಾಗಲೆ ಇರುವ ಕ್ಯಾನ್ಸರ್ ಆಸ್ಪತ್ರೆಯ 90 ಹಾಸಿಗೆ ಜೊತೆಗೆ 210 ಹಾಸಿಗೆ ಸೇರಿದಲ್ಲಿ 300 ಹಾಸಿಗೆ ಸಾಮರ್ಥ್ಯದೊಂದಿಗೆ ಕಲಬುರಗಿ ಕ್ಯಾನ್ಸರ್ ಆಸ್ಪತ್ರೆ ಉತ್ತರ ಕರ್ನಾಟಕದ ಸೆಂಟರ್ ಆಗಿ ಗುರುತಿಸಿಕೊಳ್ಳಲಿದೆ ಎಂದರು.

22 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುತ್ತಿರುವ 50 ಹಾಸಿಗೆಯ ತೀವ್ರ ನಿಗಾ ಘಟಕ ಕಾಮಗಾರಿ ಸಹ ಅಕ್ಟೋಬರ್‌ನಲ್ಲಿ ಮುಗಿಯಲಿದೆ. 9.80 ಕೋಟಿ ರೂ. ಮೊತ್ತದ ಸಿವಿಲ್ ಕಾಮಗಾರಿ ಮತ್ತು 5 ಕೋಟಿ ರೂ. ವೈದ್ಯಕೀಯ ಉಪಕರಣಗಳೊಂದಿಗೆ ಸ್ಥಾಪನೆಯಾಗುತ್ತಿರುವ 30 ಹಾಸಿಗೆಯ ಸುಟ್ಟ ಗಾಯ ಘಟಕ ಬಹುತೇಕ ಕಾಮಗಾರಿ ಮುಗಿದಿದ್ದು, ಮುಂದಿನ ಎರಡು ತಿಂಗಳಿನಲ್ಲಿ ಇದನ್ನು ಲೋಕಾರ್ಪಣೆಗೊಳಿಸಲಾಗುವುದು ಎಂದರು. ಇದಲ್ಲದೆ ಗುಲಬರ್ಗಾ ವಿ.ವಿ. ಆವರಣದಲ್ಲಿ 92 ಕೋಟಿ ರೂ. ವೆಚ್ಚದಲ್ಲಿ 150 ಹಾಸಿಗೆಯ ಇಂದಿರಾ ಗಾಂಧಿ ಮಕ್ಕಳ ಆಸ್ಪತ್ರೆಯ ಶಾಖೆ ತೆರೆಯಲಾಗುತ್ತಿದ್ದು, ಕೆಲಸ ಪ್ರಾರಂಭವಾಗಿದೆ. 50 ಕೋಟಿ ರೂ. ವೆಚ್ಚದಲ್ಲಿ 50 ಹಾಸಿಗೆಯ ಇನ್ಸಿಟ್ಯೂಟ್ ಆಫ್ ಡಯಾಬೆಟಾಲೋಜಿ ಸೆಂಟರ್ ಸ್ಥಾಪಿಸಲಾಗುತ್ತಿದೆ. 100 ಕೋಟಿ ರೂ. ವೆಚ್ಚದಲ್ಲಿ 100 ಹಾಸಿಗೆ ಸಾಮರ್ಥ್ಯದ ನಿಮ್ಹಾನ್ಸ್ ಶಾಖೆ ನಿರ್ಮಾಣಕ್ಕೆ ಟೆಂಡರ್ ಪ್ರಕ್ರಿಯೆ ಮುಕ್ತಾಯವಾಗಿದ್ದು, ಇನ್ನಷ್ಟೆ ಕೆಲಸ ಆರಂಭವಾಗಬೇಕಿದೆ. ಒಟ್ಟಾರೆಯಾಗಿ ಕಲಬುರಗಿ ನಗರವರ್ನು ಮೆಡಿಕಲ್ ಹಬ್ ಮಾಡುವ ನಿಟ್ಟಿನಲ್ಲಿ ಬಡವರಿಗೆ ಏನೆಲ್ಲ ಮಾಡಲು ಸಾಧ್ಯವೆ ಎಲ್ಲಾ ವೈದ್ಯಕೀಯ ಸವಲತ್ತು ತರುವಂತ ಕೆಲಸ ನಮ್ಮ ಸರ್ಕಾರ ಮಾಡುತ್ತಿದೆ ಎಂದರು.

ಗುಲಬರ್ಗಾ ವಿ.ವಿ. ಆವರಣದಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆಯಡಿಯಲ್ಲಿ 120 ಕೊಟಿ ರೂ. ವೆಚ್ಚದಲಿ ಮಲ್ಟಿ ಸ್ಕಿಲ್ ಡೆವಲೆಪಮೆಂಟ್ ಸೆಂಟರ್ ಸ್ಥಾಪಿಸಲಾಗುತ್ತಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. ಇದಲ್ಲದೆ ನಗರದಲ್ಲಿ 20 ಕೋಟಿ ರೂ. ವೆಚ್ಚದಲ್ಲಿ ಕಲಬುರಗಿ ಐ.ಟಿ.ಐ ಉನ್ನತಿಕರಣ ಕಾಮಗಾರಿ ಸಹ ಪ್ರಗತಿಯಲ್ಲಿದೆ ಎಂದು ಸಚಿವ ಡಾ.ಶರಣಪ್ರಕಾಶ ಪಾಟೀಲ ಮಾಹಿತಿ ನೀಡಿದರು.

ನಮ್ಮ ಸರ್ಕಾರ ಕೇವಲ ಗ್ಯಾರಂಟಿ ಯೋಜನೆಗಳಷ್ಟೆ ಜಾರಿಗೊಳಿಸಿಲ್ಲ. ಅಭಿವೃದ್ದಿ ಕಾಮಗಾರಿಗಳನ್ನು ಜೊತೆ ಜೊತೆಯಲ್ಲಿ ತೆಗೆದುಕೊಂಡು ಹೋಗುತ್ತಿದೆ. ಇದ್ಕೆ ಸಾಕ್ಷಿ ಕಲಬುರಗಿ ಜಿಲ್ಲೆಯ ಈ ಕೆಲಸ ಕಾಮಗಾರಿಗಳೆ. ಹಣ ಇಲ್ಲದಿದ್ದರೆ ಇಷ್ಟೆಲ್ಲ ಕೆಲಸ ಕಾರ್ಯ ನಡೆಯುವುದಾದರು ಹೇಗೆ ಎಂದು ಸುದ್ದಿಗಾರರನ್ನು ಮರು ಪ್ರಶ್ನಿಸಿದ ಅವರು, ತಮ್ಮ ವೈದ್ಯಕೀಯ ಇಲಾಖೆಯಲ್ಲಿ ಯಾವುದೇ ಬಿಲ್ಲು ಪೆಂಡಿಂಗ್ ಇಲ್ಲ ಎಂದು ಸ್ಪಷ್ಟಪಡಿಸಿದರು.

ಜಿಲ್ಲೆಗೊಂಡು ಮೆಡಿಕಲ್ ಕಾಲೇಜು,ಟ್ರಾಮಾ ಸೆಂಟರ್:ರಾಜ್ಯ ಸರ್ಕಾರವು ಮುಂದಿನ ಐದು ವರ್ಷದಲ್ಲಿ ಜಿಲ್ಲೆಗೊಂದು ಮೆಡಿಕಲ್ ಕಾಲೇಜು, ಕ್ಯಾನ್ಸರ್ ಆಸ್ಪತ್ರೆ, ಟ್ರಾಮಾ ಸೆಂಟರ್, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತೆರೆಯಲು ಈಗಾಗಲೆ ನಿರ್ಧರಿಸಿದ್ದು, ಹಂತ ಹಂತವಾಗಿ ಇದನ್ನು ಜಾರಿಗೆ ತರಲಾಗುತ್ತಿದೆ. ಹಿಂದೆ ನಮ್ಮ ಸರ್ಕಾರದ ಅವಧಿಯಲ್ಲಿಯೆ ಕಲಬುರಗಿಯಲ್ಲಿ ಮೆಡಿಕಲ್ ಕಾಲೇಜು,. ಟ್ರಾಮಾ ಸೆಂಟರ್ ತರಲಾಗಿತ್ತು. ಇತ್ತೀಚೆಗೆ ಸೂಪರ್ ಸ್ಪೆಷಾಲಿಟಿ ಲೋಕಾರ್ಪಣೆ ಮಾಡಿದ್ದೇವೆ, ಇದೀಗ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣದ ಹಂತದಲ್ಲಿದೆ. ಕನಕಪುರ, ರಾಮನಗರದಲ್ಲಿ ಇದೇ ವರ್ಷ ಹೊಸದಾಗಿ ಮೆಡಿಕಲ್ ಕಾಲೇಜು ಪ್ರಾರಂಭಿಸುತ್ತಿದ್ದೇವೆ. 330 ಕೋಟಿ ರೂ. ವೆಚ್ಚದಲ್ಲಿ ಬಳ್ಳಾರಿಯಲ್ಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣಕ್ಕೆ ಇತ್ತೀಚೆಗೆ ನಡೆದ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ. ಬರುವಂತಹ ಆಯವ್ಯಯದಲ್ಲಿ ಇನ್ನಷ್ಟು ಯೋಜನೆಗಳು ಜಿಲ್ಲೆಗೆ ಘೋಷಣೆ ಮಾಡಲು ಪ್ರಸ್ತಾವನೆ ಸಹ ಸಲ್ಲಿಸಲಾಗಿದೆ ಎಂದು ಡಾ.ಶರಣಪ್ರಕಾಶ ಪಾಟೀಲ ತಿಳಿಸಿದರು.

ಜಿಮ್ಸ್ ನಿರ್ದೇಶಕ ಡಾ.ಉಮೇಶ ಎಸ್.ಆರ್, ವೈದ್ಯಕೀಯ ಅಧೀಕ್ಷಕ ಡಾ.ಶಿವಕುಮಾರ ಸಿ.ಆರ್., ಜಿಲ್ಲಾ ಆಸ್ಪತ್ರೆಯ ಸರ್ಜನ್ ಡಾ.ಅಸ್ನಾ ರುಕಿಯಾ ರಬಾ ಸೇರಿದಂತೆ ಇನ್ನಿತರ ಅಧಿಕಾರಿಗಳು ಇದ್ದರು. ತದನಂತರ ಸಚಿವ ಡಾ.ಶರಣಪ್ರಕಾಶ ಪಾಟೀಲ ಅವರು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಪ್ರಗತಿ ಪರಿಶೀಲನೆ ನಡೆಸಿದರು.

ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದ ಸಂಸದ ಈ.ತುಕಾರಾಮ್

ಬಳ್ಳಾರಿ,ಫೆ.26-

ಬಳ್ಳಾರಿ ಲೋಕಸಭೆ ಕ್ಷೇತ್ರದ ಸಂಸದ ಈ.ತುಕಾರಾಮ್ ಅವರು ಬುಧವಾರ ನಗರದ ಜಿಪಂ ಹಳೆಯ ನಜೀರ್ ಸಾಬ್ ಸಭಾಂಗಣದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ಶಾಲೆ, ಶಿಕ್ಷಣ, ಆರೋಗ್ಯ, ವಸತಿ, ಕಂದಾಯ ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರು ಅಹವಾಲು ಸಲ್ಲಿಸಿದರು.

ಈ ವೇಳೆ ಮಾತನಾಡಿದ ಅವರು ಸಕಾಲದಲ್ಲಿ ಅಹವಾಲುಗಳನ್ನು ಇತ್ಯರ್ಥಪಡಿಸಲಾಗುವುದು ಎಂದು ಹೇಳಿದರು.



ಇದಕ್ಕೂ ಮುನ್ನ ಸಂಸದರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಫಲಾನುಭವಿಗಳಿಗೆ ಬ್ಯಾಟರಿ ಚಾಲಿತ ವೀಲ್ ಚೇರ್, ತೋಟಗಾರಿಕೆ ಇಲಾಖೆಯಿಂದ ಎನ್‌ಹೆಚ್‌ಎಂ, ಪಿಎಂಕೆಎಸ್‌ವೈ ಯೋಜನೆಯಡಿ ಫಲಾನುಭವಿಗಳಿಗೆ ಟ್ರ್ಯಾಕ್ಟರ್, ಟ್ರ್ಯಾಕ್ಟರ್ ಟ್ರ್ಯಾಲಿ, ಟ್ರ್ಯಾಕ್ಟರ್ ಚಾಲಿತ ಸ್ಪ್ರೇಯರ್, ಹನಿ ನೀರಾವರಿ, ಸೋಲಾರ್ ಪಂಪ್ ಸೆಟ್ ವಿತರಣೆಯ ಆದೇಶ ಪ್ರತಿ ವಿತರಿಸಿದರು.

ಬಳಿಕ ಸುಕನ್ಯಾ ಸಮೃದ್ಧಿ ಯೋಜನೆಯಡಿ ಫಲಾನುಭವಿಗಳಿಗೆ ಭಾಗ್ಯಲಕ್ಷ್ಮಿ ಬಾಂಡ್ ಆದೇಶ ಪ್ರತಿ, ಸಂಡೂರು ತಾಲ್ಲೂಕಿನಲ್ಲಿ ಅಂಗನವಾಡಿ ಕಾರ್ಯಕರ್ತೆ ಹುದ್ದೆಗಳಿಗೆ ನೇಮಕಗೊಂಡವರಿಗೆ ಆದೇಶ ಪ್ರತಿ, ಆಯುಷ್ ಇಲಾಖೆಯಿಂದ ಕಿಟ್ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ ಪೆನ್ನೇಕರ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿ- ಸಿಬ್ಬಂದಿ ಹಾಗೂ ಸಾರ್ವಜನಿಕರು ಇದ್ದರು.

ಒಂದನೇಯ ಪುಟದಿಂದ

ಒಳ ಮೀಸಲಾತಿ ವಿಧೇಯಕಕ್ಕೆ ರಾಜ್ಯಪಾಲರಿಂದ ಅಂಗೀಕಾರ

ರಾಜ್ಯಪಾಲ ಥಾವರ್ ಚಂದ್ ಗೆಹಲೋತ್ ಅವರು ಅಂಕಿತ ಹಾಕಲು ಈ ಹಿಂದೆ ನಿರಾಕರಿಸಿದ್ದು, ಹಲವು ಸ್ಪಷ್ಟನೆಗಳನ್ನು ಕೋರಿ ವಿಧೇಯಕವನ್ನು ಸರ್ಕಾರಕ್ಕೆ ವಾಪಸ್ ಕಳುಹಿಸಿದ್ದರು. ಇದರಿಂದಾಗಿ ರಾಜ್ಯ ಸರ್ಕಾರದ ಒಳಮೀಸಲಾತಿ ಜಾರಿಯ ಆಶಯಕ್ಕೆ ತಾತ್ಕಾಲಿಕ ಧಕ್ಕೆ ಉಂಟಾಗಿತ್ತು. ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗದ ಶಿಫಾರಸ್ಸಿ ನಂತೆ ಶೇ. 6, 6 ಮತ್ತು 5ರ ಅನುಪಾತದಲ್ಲಿ ಕೋಟಾ ನಿಗದಿಪಡಿಸಲಾಗಿತ್ತು, ಆದರೆ ರಾಜ್ಯಪಾಲರು ಜನವರಿ 9 ರಂದೇ ಈ ಕಡತವನ್ನು ವಾಪಸ್ ಕಳುಹಿಸಿದ್ದರು.

ತಾಯಿ, ಮಕ್ಕಳ ಆರೈಕೆಗೆ ಜಿಲ್ಲಾಧಿಕಾರಿಗಳ ಸೂಚನೆಯಂತೆ ದೇವದುರ್ಗಕ್ಕೆ ಪ್ರಸೂತಿ ತಜ್ಞರ ನೇಮಕ

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದೀತಾ ಎಮ್.ಎನ್. ಅವರು ಸ್ಥಳ ನಿಯುಕ್ತಿಗೊಂಡ ಹಿರಿಯ ತಜ್ಞವೈದ್ಯರಾದ ಡಾ.ಪುಷ್ಪಲತಾ ಹಾಗೂ ಡಾ.ರವಿಕಿರಣ್ ಅವರೊಂದಿಗೆ ಜೊತೆಗೂಡಿ ಸಂವಹನ ಕೈಗೊಂಡಿದ್ದು, ಫೆ.24ರಂದು ಪ್ರಸೂತಿ ತಜ್ಞರಾದ ಡಾ.ರವಿಕಿರಣ್ ಹಾಗೂ ತಂಡವು ಎರಡು ಶಸ್ತ್ರಚಿಕಿತ್ಸಾ ಹೆರಿಗೆಯನ್ನು ಕೈಗೊಂಡಿದ್ದು, ತಾಯಿ ಮಗು ಆರೋಗ್ಯವಾಗಿದ್ದಾರೆ.

ದೇವದುರ್ಗ ತಾಲೂಕಿನ ಜನತೆ ಹೆರಿಗೆಗಾಗಿ ರಾಯಚೂರುಗೆ ಬರುವ ಸಮಯದ ಉಳಿತಾಯ ಮಾಡುವ ಹಾಗೂ ತಾಯಿ ಮಗುವಿನ ಸುರಕ್ಷತೆಗೆ ಒಂದು ಹೆಜ್ಜೆ ಮುಂದಿಟ್ಟತಾಗಿದ್ದು, ಸಾರ್ವಜನಿಕರು ಇದರ ಪಡೆಯುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ.ಸುರೇಂದ್ರ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಳಮೀಸಲಾತಿಯ ಕಾರಣ ನೇಮಕಾತಿ ಪ್ರಕ್ರಿಯೆ ವಿಳಂಬ: ಸಿಎಂ ಸಿದ್ದರಾಮಯ್ಯ

ಪ್ರತಿಕ್ರಿಯೆ ನೀಡಿದ ಸಿಎಂ, ಗಾಂಜಾ ಸೇರಿದಂತೆ ಮಾದಕ ವಸ್ತುಗಳನ್ನು ಸಂಪೂರ್ಣವಾಗಿ ನಿಗ್ರಹಿಸಲು ಸರ್ಕಾರ ಪ್ರಯತ್ನಿಸುತ್ತಿದೆ ಎಂದು ತಿಳಿಸಿದರು.

ಸರ್ಜಾಪುರದಲ್ಲಿರುವ ಅಜೀಂ ಪ್ರೇಮ್ ಜಿ ಯೂನಿವರ್ಸಿಟಿಗೆ ಎಬಿವಿಪಿ ವಿದ್ಯಾರ್ಥಿಗಳು ನುಗ್ಗಿ ದಾಂಧಲೆ ನಡೆಸಿರುವ ಬಗ್ಗೆ ಉತ್ತರಿಸಿ, ಯಾವುದೇ ಸಂಘಟನೆಗಳು ಕಾನೂನು ವಿರುದ್ಧವಾಗಿ ನಡೆದುಕೊಂಡಲ್ಲಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ರೈತರಿಗೆ ಯಾವುದೇ ತೊಂದರೆಯಾಗದತೆ ನೋಡಿಕೊಳ್ಳಿ: ಜಿಲ್ಲಾಧಿಕಾರಿ ನಿತೀಶ್ ಕೆ

ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಈ ವೇಳೆ ಕೆಎಫ್‌ಸಿಎಸ್‌ಸಿ ಜಿಲ್ಲಾ ವ್ಯವಸ್ಥಾಪಕರಾದ ಪ್ರಕಾಶ್ ಅವರು ಮಾತನಾಡಿ, ಎಫ್‌ಸಿಐ ತನಿಖಾ ತಂಡವು ನೀಡಿರುವ ವರದಿಯಾನುಸಾರ ಹಿಂದಿನ ಸಾಲಿನಲ್ಲಿ ಹಂಚಿಕೆಯಾಗಿ ಬಳಕೆಗೆ ಯೋಗ್ಯವಿರುವ 5,53,545 ಗೋಣಿ ಚೀಲಗಳು ವಿವಿಧ ಖರೀದಿ ಕೇಂದ್ರಗಳಲ್ಲಿ ಲಭ್ಯವಿರುವುದಾಗಿ ಮತ್ತು 2.50 ಲಕ್ಷ ನೂತನ ಗೋಣಿ ಚೀಲಗಳು ಜಿಲ್ಲೆಗೆ ಹಂಚಿಕೆಯಾಗಿದ್ದು, ಅತೀ ಶೀಘ್ರದಲ್ಲಿಯೇ ಕೇಂದ್ರಗಳಿಗೆ ತಲುಪಿಸುದಾಗಿ ಸಭೆಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಲಿಂಗಸುಗೂರು ಸಹಾಯಕ ಆಯುಕ್ತರಾದ ಬಸವಣೆಪ್ಪ ಕಲಶೆಟ್ಟಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ನಜೀರ್ ಅಮಹದ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಕಾಶ್ ಚೌವಾಣ್, ಸಹಕಾರ ಸಂಘಗಳ ಉಪ ನಿಬಂಧಕರು, ಜಿಲ್ಲೆಯ ದೇವದುರ್ಗ, ಲಿಂಗಸುಗೂರು, ಮಾನವಿ, ರಾಯಚೂರು, ಸಿಂಧನೂರು, ಮಸ್ಕಿ, ಸಿರವಾರ ತಾಲೂಕಿನ ತಹಶೀಲ್ದಾರರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ವ್ಯವಸ್ಥಾಪಕರು ಸೇರಿದಂತೆ ಇತರರು ಇದ್ದರು.

ಮೊಬೈಲ್, ಟಿವಿಯಿಂದ ದೂರವಿರಲು ಜಿ.ಪಂ ಸಿಇಓ ಈಶ್ವರ ಕುಮಾರ್ ಕಾಂದೂ ಸಲಹೆ

ಮುಗಿಯುವವರೆಗೂ ಮಗುವಿಗೆ ಮೊಬೈಲ್ ಫೋನ್ ಬಳಸಲು ಅವಕಾಶ ನೀಡಬೇಡಿ. ಅವಶ್ಯಕತೆ ಇದ್ದಲ್ಲಿ ಮಾತ್ರ ಶೈಕ್ಷಣಿಕ ಕಾರಣಗಳಿಗಾಗಿ ನಿಮ್ಮ ಮೇಲ್ವಿಚಾರಣೆಯಲ್ಲಿ ಬಳಸಿ.

ಮನೆಯಲ್ಲಿ ಟಿವಿ ನೋಡುವುದನ್ನು ಸಂಪೂರ್ಣವಾಗಿ ಕಡಿಮೆ ಮಾಡಿ. ನಿಮ್ಮ ಮಗು ಓದುತ್ತಿರುವಾಗ ಮನೆಯ ಇತರ ಸದಸ್ಯರು ಟಿವಿ ನೋಡುವುದರಿಂದ ಮಗುವಿನ ಗಮನ ಬೇರೆಡೆಗೆ ಸರಿಯುತ್ತದೆ.

ಸಾಮಾಜಿಕ ಜಾಲತಾಣಗಳಿಂದ (ವ್ಯಾಟ್ಸ್ ಆಪ್, ಇನ್ಸ್ಟ್, ಯೂಟ್ಯೂಬ್) ಮಗುವನ್ನು ದೂರವಿರಿಸಿ, ಪಠ್ಯಪುಸ್ತಕಗಳತ್ತ ಗಮನ ಹರಿಸುವಂತೆ ಪ್ರೇರೇಪಿಸಿ.

ನೆನಪಿಡಿ ಪ್ರತಿ ಮಗುವಿನಲ್ಲೂ ಒಂದು ವಿಶೇಷ ಪ್ರತಿಭೆಯಿರುತ್ತದೆ. ಅಂಕಗಳು ಮಾತ್ರ ಜೀವನವಲ್ಲ, ಆದರೆ ಶ್ರದ್ಧೆಯಿಂದ ಕೆಲಸ ಮಾಡುವ ಗುಣ ಜೀವನದ ಉದ್ದಕ್ಕೂ ನೆರವಾಗುತ್ತದೆ. ನಮ್ಮ ಜಿಲ್ಲೆಯ ಎಲ್ಲಾ ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿ, ಉತ್ತಮ ಯಶಸ್ಸು ಸಾಧಿಸಲಿ ಎಂಬುದು ನನ್ನ ಆಶಯವಾಗಿದೆ. ನಿಮ್ಮ ಮಗುವಿನ ಉಜ್ವಲ ಭವಿಷ್ಯಕ್ಕಾಗಿ ನಮ್ಮ ಶುಭಹಾರೈಕೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆ, ಬಯ್ಯಾಪೂರ ಬಣಕ್ಕೆ ಭರ್ಜರಿ ಜಯ

ಸೋಲು ಅನುಭವಿಸಿದರು.

ಉಪಾಧ್ಯಕ್ಷ ಸ್ಥಾನಕ್ಕೆ ಬಯ್ಯಾಪೂರ ಬಣದ ಬೆಂಬಲಿತ ಶಿವಗ್ಯಾನಪ್ಪ, ಹೂಲಗೇರಿ ಬಣದ ಯಂಕಪ್ಪ ಸ್ಪರ್ಧೆಯಲ್ಲಿ ಇದ್ದರು. ಇಲ್ಲಿ ಕೂಡ ಬಯ್ಯಾಪೂರ ಬಣದ ಬೆಂಬಲಿತ ಗೆಲುವು ಸಾಧಿಸಿ ಹೂಲಗೇರಿ ಬಣ ಸೋಲು ಕಂಡಿತು.

ಸಂಭ್ರಮಿಸಿದ ಬಯ್ಯಾಪುರ ಬಣ : ಫಲಿತಾಂಶ ಪ್ರಕಟವಾಗುತ್ತಿದ್ದಂತೆ ಬಯ್ಯಾಪೂರ ಬಣದ ಕಾಂಗ್ರೆಸ್ ಕಾರ್ಯಕರ್ತರು ಸಂಭ್ರಮಾಚರಣೆ ನಡೆಸಿದರು. ಪಟಾಕಿ ಸಿಡಿಸಿ, ಸಿಹಿ ಹಂಚಿ ಜಯ ಘೋಷಣೆ ಕೂಗಿದರು.

ಈ ವೇಳೆ ನಗರ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಪಾಟೀಲ್, ಶಶಿಧರ ಆಶೀಹಾಳ, ಶರಣಬಸವ ವ್ಯಾಕರನಾಳ, ಬಸವರಾಜಗೌಡ ಗಣೇಕಲ್, ಚೆನ್ನಾರೆಡ್ಡಿ ಬಿರಾದಾರ ಸೇರಿದಂತೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಇದ್ದರು.

ನೌಕರರು ಉತ್ಸಾಹದಿಂದ ಕೆಲಸ ಮಾಡಲು: ಜಿ.ಪಂ ಸಿಇಓ ಈಶ್ವರ್ ಕಾಂದೂ ಸಲಹೆ

ಆಯೋಜಿಸಿದ 2025-26ನೇ ಸಾಲಿನ ನೌಕರರ ವಾರ್ಷಿಕ ಕ್ರೀಡಾಕೂಟದಲ್ಲಿ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದರು. ಕ್ರೀಡೆಯಲ್ಲಿರುವ ನಿಮ್ಮ ಉತ್ಸಾಹ ಕೆಲಸದಲ್ಲಿಯು ತೊಡಗಿಸಿಕೊಳ್ಳಬೇಕು. ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಪ್ರತಿ ನಿತ್ಯ ಕ್ರೀಡಾ ಚಟುವಟಿಕೆಯಲ್ಲಿ ನಿಮ್ಮನ್ನು ನೀವು ಸಕ್ರಿಯವಾಗಿ ತೊಡಗಿಸಿಕೊಳ್ಳುವ ಮೂಲಕ ದೈಹಿಕ, ಮಾನಸಿಕವಾಗಿ ಆರೋಗ್ಯವನ್ನು ಸದೃಢರನ್ನಾಗಿಸಿಕೊಳ್ಳಲು ಸಾಧ್ಯವಾಗುತ್ತದೆಂದು ತಿಳಿಸಿದರು.

ಕಳೆದ ಎರಡು ದಿನಗಳ ಕಾಲ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ನಿಮ್ಮಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಲು ಸಹಕಾರಿಯಾಗಿದೆ ಎಂದರು. ಕ್ರೀಡಾಕೂಟವನ್ನು ವ್ಯವಸ್ಥಿತವಾಗಿ ಆಯೋಜಿಸಿ ಯಶಸ್ವಿಗೆ ಶ್ರಮಿಸಿದ ಜಿ.ಪಂ ಅಧಿಕಾರಿಗಳಿಗೆ ಹಾಗೂ ವಿವಿಧ ತಾಲೂಕ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರಿಗೆ ಅಭಿನಂದನೆ ಸಲ್ಲಿಸಿದರು. ಮಹಿಳೆಯರ ಚೆಸ್ಸ್ ಅಲ್ಲಿ ಉರುಕುಂದಮ್ಮ ದ್ವಿತೀಯ ಸ್ಥಾನ ಹಾಗೂ ಪುರುಷರು ಚೆಸ್ಸ್ ಅಲ್ಲಿ ಬಸವೇಶ್ವರ ಪ್ರಥಮ ಸ್ಥಾನ ಪಡೆದರು.

ಗುಂಪು ಕ್ರೀಡೆಗಳಾದ ಮಹಿಳೆಯರ ಥ್ರೋಬಾಲ್ ನಲ್ಲಿ ಮಾನಸಾ ಹಾಗೂ ತಂಡ ದ್ವಿತೀಯ ಸ್ಥಾನ, ಮಹಿಳೆಯರ ಹಗ್ಗಜಗ್ಗಾಟ ಕ್ರೀಡೆಯಲ್ಲಿ ಕು.ಪೂಜಾ ಹಾಗೂ ತಂಡ ಪ್ರಥಮ ಸ್ಥಾನ ಪಡೆದರು. ಮಾನ್ವಿ ಮತ್ತು ರಾಯಚೂರು ಜಿಲ್ಲಾ ಪಂಚಾಯತ ತಂಡಗಳ ನಡುವೆ ನಡೆದ ಕ್ರಿಕೆಟ್ ಫೈನಲ್ ಪಂದ್ಯಾವಳಿಯಲ್ಲಿ ಮಾನ್ವಿ ತಂಡ ಗೆದ್ದು ಜಿಲ್ಲಾ ಪಂಚಾಯತ್ ರನ್ನರ್ ಆಪ್ ಪ್ರಶಸ್ತಿ ಪಡೆದುಕೊಂಡಿತು. ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಯೋಜನಾ ನಿರ್ದೇಶಕರು ಶರಣಬಸವರಾಜ ಕೆ, ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಇದ್ದರು.

ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿದರೆ ಜನರ ಅಭಿವೃದ್ಧಿ ಸಾಧ್ಯ-ಈ.ತುಕಾರಾಮ್

ಬಳ್ಳಾರಿ,ಫೆ.26-

ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿದರೆ ಮಾತ್ರ, ಜನರ ಅಭಿವೃದ್ಧಿ ಸಾಧ್ಯ ಎಂದು ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದರು ಹಾಗೂ ಜಿಲ್ಲಾ ಮಟ್ಟದ ದಿಶಾ ಸಮಿತಿಯ ಅಧ್ಯಕ್ಷರೂ ಆದ ಈ.ತುಕಾರಾಮ್ ಅವರು ಹೇಳಿದರು.



ನಗರದ ಜಿಲ್ಲಾ ಪಂಚಾಯತ್ ನ ಹೊಸ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಬುಧವಾರ ಏಪಡಿಸಿದ್ದ ಜಿಲ್ಲಾ ಅಭಿವೃದ್ಧಿ ಸಮನ್ವಯ ಉಸ್ತುವಾರಿ ಸಮಿತಿ ''ದಿಶಾ'' ಸಮಿತಿಯ ಮೂರನೇ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಧಿಕಾರಿಗಳು ತಮ್ಮ ಇಲಾಖೆಗಳ ಸಮಗ್ರ ಮಾಹಿತಿಯನ್ನು ಕನ್ನಡಿಯಂತೆ ಸಿದ್ಧವಿಟ್ಟುಕೊಂಡು ಸಭೆಗಳಲ್ಲಿ ಪ್ರಸ್ತುತಪಡಿಸಬೇಕು. ಇದರಿಂದ ಜನರ ಅಭಿವೃದ್ಧಿಗೆ ಬೇಕಾದ ಸಮರ್ಪಕ ಅನುದಾನ ಕುರಿತು ಸರ್ಕಾರಗಳ ಮುಂದೆ ಪ್ರಸ್ತಾಪಿಸಲು ಸಾಧ್ಯವಾಗುತ್ತದೆ ಎಂದರು.

ಪಿಎಂಎಫ್‌ಎಂಇ ಯೋಜನೆ ಸಾಕಾರಗೊಂಡಿಲ್ಲ: ಅಸಂಘಟಿತ ವಲಯದಲ್ಲಿನ ಸಣ್ಣ ಆಹಾರ ಸಂಸ್ಕರಣಾ ಘಟಕಗಳನ್ನು ಉತ್ತೇಜಿಸಲು, ಅವರಿಗೆ ಸಾಲ ಸೌಲಭ್ಯ ನೀಡಲು ಪ್ರಧಾನ ಮಂತ್ರಿ ಸೂಕ್ಷ್ಮ ಆಹಾರ ಸಂಸ್ಕರಣಾ ಉದ್ಯಮಗಳ ಯೋಜನೆಯಡಿ ಲೋನ್ ಗಾಗಿ ಸಲ್ಲಿಸಿದ ಅರ್ಜಿಗಳಲ್ಲಿ ಮಂಜೂರಾತಿಗಳಿಗಿಂತ ತಿರಸ್ಕಾರಗೊಂಡಿರುವ ಅರ್ಜಿಗಳೇ ಹೆಚ್ಚಾಗಿದ್ದು, ಯಾವ ಕಾರಣಕ್ಕೆ ತಿರಸ್ಕಾರಗೊಂಡಿವೆ? ಎಂದು ಪ್ರಶ್ನಿಸಿದ ಸಂಸದರು, ಈ ಯೋಜನೆಯು ಜಿಲ್ಲೆಯಲ್ಲಿ ಸಾಕಾರಗೊಂಡಿಲ್ಲ ಎಂದು ಕಳವಳ ವ್ಯಕ್ತಪಡಿಸಿದರು.

ಬ್ಯಾಂಕ್ ಅಧಿಕಾರಿಗಳಿಗೆ ರೈತರ ಮೇಲೆ ಕಾಳಜಿ ಇಲ್ಲ. ಅವರ ಹಣದಿಂದಲೇ ಬ್ಯಾಂಕ್ ಗಳು ವ್ಯವಹಾರ ನಡೆಸುತ್ತಿವೆ. ಮುಖ್ಯವಾಗಿ ಜಿಲ್ಲಾ ಲೀಡ್ ಬ್ಯಾಂಕ್ ಸಭೆಗಳು ನಡೆಯುತ್ತಿಲ್ಲ. ಕೃಷಿ, ತೋಟಗಾರಿಕೆ ಅಧಿಕಾರಿಗಳು ರೈತರ ಲೋನ್ ಅರ್ಜಿಗಳಿಗೆ ಸಂಬಂಧಿಸಿದಂತೆ ಬೇಕಾದ ಪೂರಕ ದಾಖಲೆಗಳ ಮಾಹಿತಿ ನೀಡಬೇಕು. ಬೆಳೆವಿಮೆ ನೋಂದಣಿಗೆ ಹೆಚ್ಚಾಗಿ ಕಾಳಜಿ ವಹಿಸಬೇಕು. ರೈತರ ಪ್ರೋತ್ಸಾಹಕ್ಕೆ ಬೆನ್ನೆಲುಬಾಗಬೇಕು ಎಂದರು.

ಮಾದರಿ ಕೃಷಿ ಉತ್ಪನ್ನ ಮಾರುಕಟ್ಟೆ ನಿರ್ಮಾಣಕ್ಕೆ ಯೋಜನೆ ರೂಪಿಸಿ: ನಗರದ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಲಭ್ಯವಿರುವ ಶೆಡ್ ಬಳಕೆಯಾಗುತ್ತಿಲ್ಲ, ರಸ್ತೆಯಲ್ಲಿ ರೈತರು ಉತ್ಪನ್ನ ಮಾರಾಟ ಮಾಡುತ್ತಿದ್ದಾರೆ. ಅವರಿಗೆ ಅಲ್ಲಿಗೆ ಹೋಗುವಂತೆ ನಿರ್ದೇಶನ ನೀಡಬೇಕು. ಸಂಡೂರು ತಾಲ್ಲೂಕಿನಲ್ಲಿ ಸುಮಾರು 25 ಲಕ್ಷ ರೂ. ವೆಚ್ಚದಲ್ಲಿ ಅತ್ಯಾಧುನಿಕ ವಾಹನ ತೂಕ ಸೇತುವೆ ನಿರ್ಮಿಸಲಾಗಿದ್ದು, ನಿರ್ವಹಣೆ ಇಲ್ಲದೇ ತುಕ್ಕು ಹಿಡಿಯುತ್ತಿದೆ. ಕೇಂದ್ರ, ರಾಜ್ಯ ಅನುದಾನ ದುರ್ಬಳಕೆಯಾಗಿದೆ. ಜವಾಬ್ದಾರಿ ಇದೆಯೇ? ಎಂದು ಎಪಿಎಂಸಿ ಉಪನಿರ್ದೇಶಕರಿಗೆ ಪ್ರಶ್ನಿಸಿದರು. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಅತ್ಯಾಧುನಿಕ ಕೃಷಿ ಉತ್ಪನ್ನ ಮಾರುಕಟ್ಟೆ ನಿರ್ಮಾಣ ಮಾಡಲು ಮಾಸ್ಟರ್ ಪ್ಲಾನ್ ರೂಪಿಸಬೇಕು ಎಂದು ತಿಳಿಸಿದರು.

ಕಾಲೇಜುಗಳಿಗೆ ಸಿಸಿಟಿವಿ ಅಳವಡಿಸಲು ಸೂಚನೆ: ಜಿಲ್ಲೆಯಲ್ಲಿ ಕಳ್ಳತನ ಪ್ರಕರಣ ಕಂಡುಬರುತ್ತಿವೆ. ರಾತ್ರಿ ವೇಳೆ ಗಸ್ತು ಪಡೆ ಹೆಚ್ಚಿಸಬೇಕು. ಇಸ್ಪಿಟ್, ಜೂಜಾಟ, ಅಕ್ರಮದಂಥ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕಿದೆ ಎಂದು ಎಸ್ಪಿಯವರಿಗೆ ಸೂಚಿಸಿದ ಸಂಸದರು, ನಗರದಲ್ಲಿ ಪದವಿ, ಪದವಿ ಪೂರ್ವ ಕಾಲೇಜುಗಳಲ್ಲಿ ರ್‍ಯಾಗಿಂಗ್ ಚಟುವಟಿಕೆ ಕಂಡುಬರುತ್ತಿದ್ದು, ಕಾಲೇಜು ಆವರಣಗಳಲ್ಲಿ ಸಿಸಿಟಿವಿ ಅಳವಡಿಸುವಂತೆ ಮಹಾನಗರ ಪಾಲಿಕೆ ಆಯುಕ್ತರಿಗೆ ಸೂಚಿಸಿದರು.

ಕಾಗದರಹಿತ ಸಭೆ ನಡೆಸಲು ಮುಂದಡಿ: ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳಿಗೆ ಹಂಚಿಕೆಯಾದ ಅನುದಾನ ಮಾಹಿತಿ, ಅನುಷ್ಠಾನದ ವಿವರ, ಕಾಮಗಾರಿ ಪ್ರಗತಿ ಹಾಗೂ ಅಧಿಕಾರಿಗಳ ಸಮಯ ಉಳಿತಾಯಕ್ಕಾಗಿ ಜಿಲ್ಲಾ ಮಟ್ಟದ ಅಧಿಕಾರಿಗಳನ್ನೊಳಗೊಂಡು ತಹಶೀಲ್ದಾರ್, ತಾಪಂ ಇಓ ಗಳಿಗೆ ಎನ್‌ಎಂಡಿಸಿ ಸಿಎಸ್‌ಆರ್ ಅನುದಾನದಡಿ ಜೂನ್ ಒಳಗಾಗಿ ಟ್ಯಾಬ್ ವಿತರಿಸಲು ಮುಂದಡಿ ಇಡಲಾಗುವುದು. ಇದರಿಂದ ರಾಜ್ಯದಲ್ಲಿಯೇ ಪ್ರಥಮ ಬಾರಿಗೆ ಬಳ್ಳಾರಿಯಲ್ಲಿ ಪಾರ್ಲಿಮೆಂಟ್ ಮಾದರಿಯಲ್ಲಿ ಕಾಗದರಹಿತ ಡಿಜಿಟಲ್ ದಿಶಾ, ಕೆಡಿಪಿ ಸಭೆ ನಡೆಸಲಾಗುವುದು ಎಂದರು.

ಸಮಗ್ರ ಶಿಕ್ಷಣ ಅಭಿಯಾನದಡಿ ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ಕ್ರೀಡಾ ಸಾಮಾಗ್ರಿ ಖರೀದಿ, ಶಾಲೆಗಳಲ್ಲಿ ಪರಿಸರ ಹಸಿರುಕರಣ ಹಾಗೂ ಇತರೆ ಕೌಶಲ ತರಬೇತಿ ಕಾರ್ಯಕ್ರಮಗಳಿಗಾಗಿ ಬಿಡುಗಡೆಯಾದ ಅನುದಾನ ಮಾಹಿತಿ ನೀಡಬೇಕು ಎಂದು ಡಿಡಿಪಿಐ ಅಧಿಕಾರಿಗೆ ತಿಳಿಸಿದರು.

ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿ ಕೊರತೆ ಇದೆ ಎಂಬುದರ ಕುರಿತು ಮಾಧ್ಯಮಗಳಲ್ಲಿ ವರದಿಯಾಗುತ್ತಿದ್ದು, ಆರೋಗ್ಯ ಸಚಿವ ಡಾ.ದಿನೇಶ್ ಗುಂಡೂರಾವ್ ಅವರು ಈಗಾಗಲೇ ಅಗತ್ಯ ಕ್ರಮ ವಹಿಸಿದ್ದಾರೆ. ಜಿಲ್ಲೆಯಲ್ಲಿ ಯಾವುದಾದರೂ ಆಸ್ಪತ್ರೆಗಳಲ್ಲಿ ಔಷಧಿ ಕೊರತೆ ಕಂಡುಬಂದಿದೆಯೇ? ಎಂದು ಜಿಲ್ಲಾ ಆರೋಗ್ಯಾಧಿಕಾರಿಯವರಿಗೆ ವಿಚಾರಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು ಅವರು ಪ್ರತಿಕ್ರಿಯಿಸಿ, ಜಿಲ್ಲೆಯಲ್ಲಿ ಔಷಧಿಗಳ ಕೊರತೆ ಕಂಡುಬಂದಿಲ್ಲ ಎಂದು ಸಭೆಗೆ ತಿಳಿಸಿದರು.

ನಗರದ ಟಿಬಿ ಸೆಂಟರ್ ಜಂಕ್ಷನ್ ನಿಂದ ಹೊರವಲಯದ ವೇಣಿವೀರಾಪುರ ಬಳಿಯ ಎನ್ ಹೆಚ್ ರಸ್ತೆಗೆ ಕೂಡುವಂತೆ 4 ಲೇನ್ ರಸ್ತೆ, ಅಲ್ಲಿಂದ (ವೇಣಿ ವೀರಾಪುರ ಬಳಿಯಿಂದ) ಸಿರುಗುಪ್ಪ ರಸ್ತೆಗೆ ತಲುಪುವ ರಿಂಗ್ ರೋಡ್ ನಿರ್ಮಾಣಕ್ಕೆ ಸಂಬಂಧಿಸಿದಂತೆ ಕೇಂದ್ರದಿಂದ ಅನುಮತಿ ಪಡೆಯಲು ಸೂಕ್ತವಾದ ವೈಜ್ಞಾನಿಕ ವರದಿ ತಯಾರಿಸಿ ನೀಡುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ತಿಳಿಸಿದರು. ಅದೇ ರೀತಿಯಾಗಿ ಬಳ್ಳಾರಿ-ಸಿರುಗುಪ್ಪ ಗೆ ಹೋಗುವ ರಸ್ತೆ ನಿರ್ಮಾಣ ಕಾಮಗಾರಿಗೆ ವೇಗ ನೀಡಬೇಕು ಎಂದು ರಾಜ್ಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚಿಸಿದರು.

ಬೇಸಿಗೆ ಆರಂಭವಾಗುತ್ತಿರುವ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಆರ್‌ಓ ಘಟಕಗಳನ್ನು ದುರಸ್ತಿ ಮಾಡಿಟ್ಟುಕೊಳ್ಳಬೇಕು. ಕುಡಿಯುವ ನೀರಿಗೆ ಹಾಹಾಕಾರವಾಗದಂತೆ ನೋಡಿಕೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ ಬಾಲ್ಯವಿವಾಹ, ಪೋಕ್ಸೋ ಕಾಯ್ದೆ ಕುರಿತು ಕಲಾವಿದರ ಮೂಲಕ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಸರ್ಕಾರಗಳ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದರಿಂದ ಸಮುದಾಯಗಳ ಮೇಲೆ ಪರಿಣಾಮ ಬೀರಲಿದೆ ಎಂದರಲ್ಲದೇ, ಅರಣ್ಯ ಹಕ್ಕು ಸಮಿತಿ ಬಗ್ಗೆ ಅರಿವು ಹೊಂದಬೇಕು. ಒಟ್ಟಾರೆ ಅಧಿಕಾರಿಗಳು ಮಾನವೀಯತೆಯ ಕೆಲಸ ಮಾಡಬೇಕು ಎಂದರು.

ರಾಜ್ಯ ಸಭೆ ಸದಸ್ಯ ಡಾ.ಸೈಯದ್ ನಾಸೀರ್ ಹುಸೇನ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಮಕ್ಕಳಲ್ಲಿ ಸಾಮಾನ್ಯವಾಗಿ ಕಂಡುಬರುವ ಆರೋಗ್ಯ ನ್ಯೂನ್ಯತೆಗಳನ್ನು ಗುರುತಿಸಬೇಕು.ಇದರಿಂದ ಮಕ್ಕಳನ್ನು ಸದೃಢರನ್ನಾಗಿಸಲು ಕೈಗೊಳ್ಳಬಹುದಾದ ಯೋಜನೆಗಳನ್ನು ರೂಪಿಸಬಹುದು ಎಂದು ಅಭಿಪ್ರಾಯಪಟ್ಟರು.

ಸಭೆಯಲ್ಲಿ ವಿವಿಧ ಇಲಾಖೆಗಳ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಸುದೀರ್ಘ ಚರ್ಚೆ ನಡೆಸಿ ಸೂಕ್ತ-ಸಲಹೆ ಸೂಚನೆ ನೀಡಿದರು.

ಈ ವೇಳೆ ಸಂಡೂರು ಶಾಸಕರಾದ ಈ.ಅನ್ನಪೂರ್ಣ, ವಿಧಾನ ಪರಿಷತ್ ಶಾಸಕ ವೈ.ಎಂ.ಸತೀಶ್, ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ ಪೆನ್ನೇಕರ್, ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಕೆ.ಎನ್. ಬಸವರಾಜ, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಪಂ ಇಓ ಗಳು ಹಾಗೂ ಇತರರು ಉಪಸ್ಥಿತರಿದ್ದರು.

ಸಿರಿಧಾನ್ಯದ ಉಪಯೋಗದ ಬಗ್ಗೆ ಹೆಚ್ಚು ಅರಿವು ಮೂಡಿಸಿ : ಶಾಸಕ ಚೆನ್ನಾರೆಡ್ಡಿ ಪಾಟೀಲ್ ಸಲಹೆ

ಯಾದಗಿರಿ : ಫೆ.26-

ಸಿರಿಧಾನ್ಯಗಳನ್ನು ಬಳಕೆ ಮಾಡುವುದರಿಂದ ಆರೋಗ್ಯಕ್ಕೆ ಆಗುವ ಲಾಭಗಳ ಬಗ್ಗೆ ವ್ಯಾಪಕ ಜಾಗೃತಿ ಮೂಡಿಸಬೇಕೆಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಹೇಳಿದರು.



ಜಿಲ್ಲಾಡಳಿತ, ಜಿಪಂ,ಕೃಷಿ ಇಲಾಖೆ ಮತ್ತು ಜಿಲ್ಲಾ ಕೃಷಿಕ ಸಮಾಜ ಸಂಯುಕ್ತವಾಗಿ ಬುಧವಾರ ಬೆಳಗ್ಗೆ ನಗರದ ಹೊಸ ಬಸ್ ನಿಲ್ದಾಣದ ಆವರಣದಲ್ಲಿ ಆಯೋಜಿಸಿದ್ದ ಸಿರಿಧಾನ್ಯ ನಡಿಗೆಗೆ ಚಾಲನೆ ನೀಡಿ ಮಾತನಾಡಿದರು.

ಬಿಳಿ ಜೋಳ, ಸಜ್ಜೆ ನವಣೆ, ಕಣವಿ ಸೇರಿದಂತೆಯೇ ಸಿರಿಧಾನ್ಯದ ಸಕಲ ಪದಾರ್ಥಗಳು ಆರೋಗ್ಯಕ್ಕೆ ಉತ್ತಮ ಔಷಧಿಗಳಾಗಿವೆ. ಹಿಂದಿನ ಕಾಲದಲ್ಲಿ ಹಿರಿಯರು ಇವುಗಳನ್ನೇ ಬಳಸಿ ಗಟ್ಟಿಮುಟ್ಟಾದ ಆರೋಗ್ಯ ಹೊಂದಿದ್ದರು. ಆದರೇ ಬಾಯಿ ರುಚಿಯ ಚಟ ಅಂಟಿಸಿಕೊಂಡ ಇಂದಿನ ಬಹುತೇಕರು ಜಂಕ್ ಫುಡ್ ಸೇವಿಸಿ ಆರೋಗ್ಯ ಕೆಡಿಸಿಕೊಳ್ಳುತ್ತಿದ್ದಾರೆಂದು ವಿಷಾಧಿಸಿದರು.

ಜಿಲ್ಲೆಯಲ್ಲಿ ಸಿರಿಧಾನ್ಯ ಉತ್ಪಾದನೆ, ಬಳಕೆಗೆ ಕೃಷಿ ಇಲಾಖೆ ಅಧಿಕಾರಿಗಳು ಸಾಕಷ್ಟು ಒತ್ತು ನೀಡುತ್ತಿರುವ ಪರಿಣಾಮ 25 ಸಾವಿರ ಎಕರೆ ಭೂಮಿಯಲ್ಲಿ ಸಿರಿಧಾನ್ಯಗಳು ಬೆಳೆಯಲಾಗುತ್ತಿದೆ ಎಂಬ ಮಾಹಿತಿ ಸಂತಸ ತಂದಿದೆ. ಇದು ಹೆಚ್ಚಾಗಬೇಕೆಂದರು.

ಪ್ರತಿ ಊರಿನ ಎಲ್ಲ ಮನೆಗಳಿಗೆ, ಶಾಲಾ, ಕಾಲೇಜುಗಳಿಗೆ ಈ ಬಗ್ಗೆ ಸೂಕ್ತ ಮಾಹಿತಿ ರವಾನಿಸುವ ಕೆಲಸ ಆಗಬೇಕೆಂದು ಶಾಸಕರು ಹೇಳಿ, ಹಲವು ರೋಗಗಳಿಗೆ ಈ ಧಾನ್ಯಗಳು ವರವಾಗಿವೆ. ಉತ್ಪಾದಕರಿಗೆ ಉತ್ತಮ ಧಾರಣೆಯೂ ಸಿಗುತ್ತದೆ. ಹೀಗಾಗಿ ಇದನ್ನು ಹೆಚ್ಚು, ಹೆಚ್ಚಾಗಿ ಬೆಳೆಯಬೇಕೆಂದು ಶಾಸಕ ಪಾಟೀಲ್ ಹೇಳಿದರು.

ನಮ್ಮಫಲವತ್ತಾದ ಭೂಮಿಯನ್ನು ಆಂದ್ರದವರು ಲೀಜ್‌ಗೆ ಪಡೆದು, ಇಲ್ಲವೇ ಖರೀದಿಸಿ ಅತಿ ಹೆಚ್ಚಿನ ಮಸಾಲೆ ಪದಾರ್ಥ, ಹೆಚ್ಚಿನ ಭತ್ತದ ಇಳುವರಿ ಪಡೆದು ಲಾಭ ಮಾಡಿಕೊಂಡು ಭೂಮಿತಾಯಿಯನ್ನು ಬರಡು ಮಾಡಿ ಹೋಗುವಾಗ ನಮಗೆ ಮಾರುತ್ತಾರೆ. ನಂತರ ನಮ್ಮ ಸಂಪ್ರದಾಯಕ ಬೆಳೆಗಳು ಬೆಳೆಯಲಾಗದೇ ನಷ್ಟ ಅನುಭವಿಸಿ ಬೀದಿ ಪಾಲಾಗುವ ಸ್ಥಿತಿ ನಮ್ಮ ರೈತರದ್ದಾಗಿದೆ ಎಂದು ಶಾಸಕ ತುನ್ನೂರ್ ಹೇಳಿದರು.

ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಮಾತನಾಡಿ, ಈ ಹಿಂದೆ ನಮ್ಮ ನೆಲದ ಕೃಷಿಕರು ಸಿರಿಧಾನ್ಯಗಳನ್ನೇ ಬೆಳೆಯುತ್ತಿದ್ದರು. ಈಗ ಬೆಳೆಯುವುದು ಕಷ್ಟಕರವಾಗಿದೆ. ಕಾರಣ, ಕಡಿಮೆ ಖರ್ಚಿನಲ್ಲಿ ಹೆಚ್ಚು ಬೆಳೆ ಪಡೆಯಬೇಕೆಂಬ ಇಚ್ಛೆ ಹೆಚ್ಚಾಗಿದೆ ಎಂದರು. ಕಲುಷಿತ ಮತ್ತು ವಿಷಪೂರಿತ ಆಹಾರ ಧಾನ್ಯಗಳ ಬದಲಿಗೆ ಸಿರಿಧ್ಯಾನಗಳನ್ನೆ ಬಳಸಿ. ಇದಕ್ಕೆ ಸರ್ಕಾರಗಳು ಸಾಕಷ್ಟು ಪ್ರೊತ್ಸಾಹ ನೀಡುತ್ತಿದೆ ಎಂದರು.

ಎಸ್.ಪಿ ಪೃಥ್ವಿಕ ಶಂಕರ ಮಾತನಾಡಿ, ಆರೋಗ್ಯ ಸಂಪತ್ತಿನ ಮುಂದೆ ಬೇರೆ ಯಾವ ಸಂಪತ್ತು ದೊಡ್ಡದಲ್ಲ. ಮೊದಲು ನಮ್ಮಲ್ಲೆರ ಹುಟ್ಟು, ಸಾವು ಮನೆಗಳಲ್ಲಿಯೇ ಆಗುತ್ತಿದ್ದವು. ಆದರೇ ಇಂದು ಈ ಎರಡು ಆಸ್ಪತ್ರೆಗಳಲ್ಲಿಯೇ ಆಗುತ್ತಿವೆ. ಅಂದರೇ ಜೀವನ, ಆಹಾರ ಶೈಲಿ ಬದಲಾಗಿದೆ. ಇದು ಅನೇಕ ಬದಲಾವಣೆಗಳಿಗೆ ಕಾರಣವಾಗಿದೆ. ಅದಕ್ಕಾಗಿ ಸಿರಿಧಾನ್ಯ ಬಳಸಿ ಗಟ್ಟಿಮುಟ್ಟಾಗಿ ಬದುಕೋಣ ಎಂದು ಸ್ವಾರಸ್ಯಕರವಾಗಿ ವಿವರಿಸಿದರು.

ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ್ ಮಾತನಾಡಿ, ಜೋಳ, ತೊಗರಿ, ಸಜ್ಜೆ, ನವಣೆಯಂತಹ ಆಹಾರಗಳಲ್ಲಿ ಪವಿತ್ರತೆ ಇದೆ. ಗಟ್ಟಿತನವಿದೆ. ರೋಗ ನಿರೋಧಕ ಶಕ್ತಿ ಇದೆ. ಆದರೇ ಇವುಗಳ ಉತ್ಪಾದನೆಗೆ ರೈತ ಮುಂದಾದರೇ ನಿರೀಕ್ಷೆ ಮಾಡಿದಷ್ಟು ಲಾಭ ಆಗುತ್ತಿಲ್ಲ. ಇದಕ್ಕೆ ಸರ್ಕಾರವೇ ಹೆಚ್ಚಿನ ಅನುಕೂಲ ಮಾಡಿಕೊಡಬೇಕೆಂದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ರತೇಂದ್ರನಾಥ ಸೂಗುರ ಪ್ರಾಸ್ತಾವಿಕವಾಗಿ ಮಾತನಾಡಿ, ನಮ್ಮ ನಡೆ ಸಿರಿಧಾನ್ಯ, ರೈತರ ಸಬಲಿಕರಣ ಮತ್ತು ಈ ಧಾನ್ಯಗಳ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಸರ್ಕಾರ ಈ ಕಾರ್ಯಕ್ರಮ ಹಮ್ಮಿಕೊಂಡಿದೆ. ಸಿರಿಧಾನ್ಯ ಬಳಸಿ ಆರೋಗ್ಯ ಕಾಪಾಡಿಕೊಳ್ಳಿ ಎಂದರು.

ಜಾಥಾದಲ್ಲಿ ಸಾವಿರಾರು ಜನ ಭಾಗಿ ಹೊಸ ಬಸ್ ನಿಲ್ದಾಣದಿಂದ ಆರಂಭಗೊಂಡ ಸಿರಿಧಾನ್ಯ ಜಾಥಾ ಶಾಸ್ತ್ರಿ ಚೌಕ್, ಸುಭಾಷಚಂದ್ರ ಬೋಸ್ ವೃತ್ತದ ಮೂಲಕ ಸರ್ಕಾರಿ ಪದವಿ ಕಾಲೇಜಿಗೆ ಬಂದು ಸಮಾಪ್ತಿಯಾಯಿತು. ಅಲ್ಲಿ ಎಲ್ಲರಿಗೂ ಸಿರಿಧಾನ್ಯದ ಜೂಸ್ ನೀಡಲಾಯಿತು.

ಹೆಚ್ಚುವರಿ ಎಸ್.ಪಿ ಧರಣೇಶ, ಡಿವೈಎಸ್ ಪಿ ಭರತಕುಮಾರ ತಳವಾರ, ಉಪ ಕೃಷಿ ನಿರ್ದೇಶಕ ಹಂಪಣ್ಣ ವೈ.ಎಲ್, ವಿವಿಧ ತಾಲೂಕು ಕೃಷಿಅಧಿಕಾರಿಗಳಾದ ರಾಜಕುಮಾರ, ಸುರೇಶ.ಬಿ., ರಾಮಣ್ಣಗೌಡ, ಸುನೀಲಕುಮಾರ, ರವಿಕುಮಾರ, ವಿಶ್ವಾರಾಧ್ಯ, ಎನ್ ಎಬಿಎಆರ್‌ಡಿಅಧಿಕಾರಿ ಯಮುನಾ, ಡಿಎಚ್‌ಓ ಡಾ.ಮಹೇಶ ಬಿರಾದಾರ, ಕೃಷಿ ಇಲಾಖೆ ತಾಂತ್ರಿಕ ಅಧಿಕಾರಿ ಯಾಮರೆಡ್ಡಿ, ಕಛೇರಿ ಅಧೀಕ್ಷಕಾರದ ವೆಂಕಟೇಶ ಹಿರೆನೂರ್, ಮುಖಂಡರಾದ ಶರಣಗೌಡ ಮಾಲಿಪಾಟೀಲ್, ಬಸವರಾಜ ಮೊಟನಳ್ಳಿ, ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ವೆಂಕಟರೆಡ್ಡಿ ತಂಗಡಗಿ ಶರಣಗೌಡ ಬಲಕಲ್, ಕೃಷಿ ಇಲಾಖೆ ಸಿಬ್ಬಂದಿ ಸೇರಿದಂತೆ ಇತರರಿದ್ದರು.

ದ್ವಿತೀಯ ಪಿಯುಸಿ ಪರೀಕ್ಷೆ ಪಾರದರ್ಶಕವಾಗಿ ನಡೆಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಿ-ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ.ಕರಾಳೆ

ಬೀದರ, ಫೆ.26-

ಜಿಲ್ಲೆಯಲ್ಲಿ 2026ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯನ್ನು ಪಾರದರ್ಶಕವಾಗಿ ಹಾಗೂ ಅತ್ಯಂತ ವ್ಯವಸ್ಥಿತವಾಗಿ ನಡೆಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ.ಕರಾಳೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ದ್ವಿತೀಯ ಪರೀಕ್ಷೆ ಕುರಿತು ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ದ್ವಿತೀಯ ಪಿಯುಸಿ ಪರೀಕ್ಷೆಗಳು ಫೆಬ್ರವರಿ.28 ರಿಂದ ಮಾರ್ಚ.17 ರವರೆಗೆ ನಡೆಯುವ ಪರೀಕ್ಷೆಗಾಗಿ ಜಿಲ್ಲೆಯಲ್ಲಿ 199 ಕಾಲೇಜು, 36 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಬೀದರ (15), ಭಾಲ್ಕಿ (05), ಔರಾದ-ಬಿ (03), ಹುಮನಾಬಾದ (08), ಬಸವಕಲ್ಯಾಣ (05) ಸೇರಿ ಒಟ್ಟು 36 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 21856 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಪ್ರವೇಶ ಪತ್ರಗಳನ್ನು ಅನ್‌ಲೈನ್ ಮೂಲಕ ಎಲ್ಲ ಕಾಲೇಜುಗಳಿಗೆ ವಿತರಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಪ್ರತಿ ಪರೀಕ್ಷಾ ಕೇಂದ್ರಗಳಿಗೆ ಮುಖ್ಯ ಅಧೀಕ್ಷಕರು ಸಂಪೂರ್ಣ ಜವಾಬ್ದಾರಿ ಹೊಂದಿದ್ದು, ನಿಯಮಗಳಂತೆ ಯಾವುದೇ ಲೋಪವಾಗದಂತೆ ಪರೀಕ್ಷೆ ನಡೆಸಬೇಕು. ಜಿಲ್ಲೆಯಲ್ಲಿನ ಸೂಕ್ಷ್ಮ ಪರೀಕ್ಷೆ ಕೇಂದ್ರಗಳಲ್ಲಿ ಕಟ್ಟೆಚರವಹಿಸಬೇಕು. ಪರೀಕ್ಷಾ ಕೇಂದ್ರದ ಮುಖ್ಯಸ್ಥರು ವಿದ್ಯಾರ್ಥಿಗಳಿಗೆ ಆಸನದ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ನಕಲು ಅಥವಾ ಸಾಮೂಹಿಕ ನಕಲು ಕಂಡಬಂದಲ್ಲಿ ಸಿದ್ರಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು. ಪರೀಕ್ಷಾ ಕೇಂದ್ರಗಳ ಸಮೀಪದಲ್ಲಿರುವ ಝಿರಾಕ್ಸ್ ಮತ್ತು ಕಂಪ್ಯೂಟರ್, ಸೈಬರ್ ಅಂಗಡಿಗಳನ್ನು ಮುಚ್ಚಿಸುವಂತೆ ಆದೇಶಿಸಲಾಗುವುದು ಎಂದರು.

ಮಾರ್ಗಸೂಚಿಯಂತೆ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಟಿವಿ ಕಣ್ಗಾವಲಿನಲ್ಲಿ ಹಾಗೂ ವೆಬ್ ಕೌನ್ಸಿಂಗ ನಿರ್ವಹಣೆ ಮಾಡಲಾಗಿದೆ. ಪರೀಕ್ಷೆ ಕೊಠಡಿಯೊಳಗೆ ಎಲೆಕ್ಟ್ರಾನಿಕ್ ವಸ್ತುಗಳು, ಮೊಬೈಲ್, ಪೆನ್‌ಡ್ರೈವ್, ಏರಫೋನ್, ಮೈಕ್ರೋಫೋನಗಳು, ಬ್ಲೂಟೂತ, ಸಾಧನ ಕೈಗಡಿಯಾರ ಅನುಮತಿಸಲಾಗುವುದಿಲ್ಲ. ವಿದ್ಯಾರ್ಥಿಗಳಾಗಲಿ, ಸಿಬ್ಬಂದಿಗಳಾಗಲಿ ಮೊಬೈಲ್ ಬಳಕೆ ಫೋಟೋಗ್ರಾಫ ಸಂಪೂರ್ಣ ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರದ ಹೊರಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕೆಂದರು. ಪಾರದರ್ಶಕವಾಗಿ ಪರೀಕ್ಷೆ ನಡೆಸಲು ಮುಖ್ಯ ಅಧೀಕ್ಷಕರು ಕೊಠಡಿ ಮೇಲ್ವಿಚಾರಕರೊಂದಿಗೆ ಮುಂಚಿತವಾಗಿ ಸಭೆ ನಡೆಸಿ ನಿಯಮಗಳಂತೆ ಪರೀಕ್ಷೆ ನಡೆಸಲು ಸೂಚಿಸಬೇಕು. ಸುಸೂತ್ರ ಪರೀಕ್ಷೆಗೆ ಪೊಲೀಸ್ ಇಲಾಖೆ, ಖಜಾಣೆ ಇಲಾಖೆ ಸಂಬಂಧಿಸಿದಂತೆ ಇಲಾಖೆಗಳ ಸಹಕಾರಕ್ಕೆ ಸೂಚಿಸಲಾಗಿದೆ. ಪರೀಕ್ಷಾ ಕೇಂದ್ರದ ಹೊರಗೆ ಜನಸಂದಣಿ ಮೇಲೆ ನಿಗಾ ಇಡಬೇಕು.

ನಿಮ್ಮೂರು ಸುದ್ದಿ

ಸಂಪಾದಕೀಯ

ನಿರುದ್ಯೋಗ ಸಮಸ್ಯೆ ಸರಳವಲ್ಲ, ಸ್ಪಂದಿಸದಿದ್ದರೆ ಸರ್ಕಾರಕ್ಕೆ ತೊಂದರೆ ತಪ್ಪಿದ್ದಲ್ಲ



ನಿರುದ್ಯೋಗ ಎನ್ನುವುದು ಸರಳ ಸಮಸ್ಯೆ ಅಲ್ಲ. ಅದು ಸದಾ ಕುದಿಯುವ ಜ್ವಾಲಾಮುಖಿ. ಧಾರವಾಡದ ನಿರುದ್ಯೋಗಿ ಯುವಜನರು ಶ್ರೀಮಂತರ ಮಕ್ಕಳಲ್ಲ, ಬಡವರ ಮಕ್ಕಳು. ಅವರ ಕಷ್ಟ, ಸಂಕಟ, ಹತಾಶೆ ಈಗ ಸ್ಫೋಟಗೊಂಡಿದೆ. ನಾಗರಿಕ ಸಮಾಜ ಅವರ ಬೆಂಬಲಕ್ಕೆ ನಿಲ್ಲಬೇಕಿದೆ.

ಕಳೆದ ಮಂಗಳವಾರ ಧಾರವಾಡದಲ್ಲಿ ನಡೆದ ಉದ್ಯೋಗ ನೇಮಕಾತಿಗೆ ಆಗ್ರಹಿಸಿ ನಡೆದ ಉದ್ಯೋಗಾಕಾಂಕ್ಷಿಗಳ ಹೋರಾಟ, ಇತ್ತೀಚಿನ ದಿನಗಳಲ್ಲಿ ನಡೆದ ಬೃಹತ್ ಪ್ರತಿಭಟನಾ ಮೆರವಣಿಗೆಯಾಗಿತ್ತು. ಮಡುಗಟ್ಟಿದ ಯುವಜನರ ಆಕ್ರೋಶ ಒಮ್ಮೆಲೆ ಸ್ಫೋಟಿಸಿತ್ತು. ಸರ್ಕಾರಗಳಿಗೆ ನೀಡಿದ ಎಚ್ಚರಿಕೆಯಾಗಿತ್ತು.

ಹಿಂದಿನಿಂದಲೂ ಖಾಲಿ ಹುದ್ದೆಗಳಿಗೆ ನೇಮಕಾತಿ ನಡೆಸಲು ಕ್ರಮ ಕೈಗೊಳ್ಳುವಂತೆ ವಿದ್ಯಾರ್ಥಿಗಳು, ಯುವಜನರು ಸರ್ಕಾರವನ್ನು ಒತ್ತಾಯಿಸುತ್ತಲೇ ಬಂದಿದ್ದರು. ಪ್ರತಿಭಟನೆ ಮೂಲಕ ಸರ್ಕಾರವನ್ನು ಎಚ್ಚರಿಸಿದ್ದರು. ಆದರೆ ಆಳುವ ಸರ್ಕಾರ ಯುವಜನರಿಗೆ ಉದ್ಯೋಗ ಒದಗಿಸುವ ಬದಲು, ಪ್ರತಿಭಟನೆಯನ್ನು ಹತ್ತಿಕ್ಕುವತ್ತ, ಅವರ ಮನೋಸ್ಥೈರ್ಯ ಕುಗ್ಗಿಸುವತ್ತ ಗಮನ ಹರಿಸಿತು. ಭಂಡಾಟಕ್ಕೆ ಬಿದ್ದು, ಮುಂದೂಡುವ ತಂತ್ರಕ್ಕೆ ತಲೆಬಾಗಿ, ಜವಾಬ್ದಾರಿಯಿಂದ ನುಣುಚಿಕೊಳ್ಳಲು ನೋಡಿತು. ಏಕೆಂದರೆ ರಾಜಕಾರಣಿಗಳ ಮಕ್ಕಳು ಯಾರೂ ನಿರುದ್ಯೋಗಿಗಳಲ್ಲ, ನಿರುದ್ಯೋಗ ಅವರಿಗೆ ಸಮಸ್ಯೆಯೇ ಅಲ್ಲ. ಹಾಗಾಗಿ ಬಡ ಯುವಜನರ ಆತಂಕ, ಹತಾಶೆ ಮತ್ತು ಅನಿಶ್ಚಿತತೆಯ ಆಳ ಮತ್ತು ಅಗಲ ಅರಿಯುವಲ್ಲಿ ಆಳುವ ಸರ್ಕಾರ ವಿಫಲವಾಗಿದೆ.

ಧಾರವಾಡದದಲ್ಲಿ ಯುವಜನರು ಬೀದಿಗಿಳಿದದ್ದು, ಪ್ರತಿಭಟಿಸಿದ್ದು ಹುದುಗಿಟ್ಟ ಆಕ್ರೋಶದ ಪ್ರತೀಕವಾಗಿತ್ತು. ಆ ಆಕ್ರೋಶಭರಿತ ಪ್ರತಿಭಟನೆಗೆ ಬೆಚ್ಚಿದ ರಾಜ್ಯ ಸರ್ಕಾರ, ಇಂದಿನ ಈ ದುಃಸ್ಥಿತಿಗೆ ಬಿಜೆಪಿ ಸರ್ಕಾರದ ಅವಧಿಯಲ್ಲಾದ ಅಕ್ರಮಗಳು ಮತ್ತು ಭ್ರಷ್ಟಾಚಾರಗಳು ಕಾರಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಮಜಾಯಿಷಿ ನೀಡಿದರು.

ಆಳುವ ಸರ್ಕಾರದ ಬಳಿ ಯುವಜನರಿಗೆ ಉದ್ಯೋಗ ಕೊಡದೆ ಇರುವುದಕ್ಕೆ ಹಾಗೂ ವಿಳಂಬವಾಗುತ್ತಿರುವುದಕ್ಕೆ ಕಾರಣಗಳಿರಬಹುದು. ಮೀಸಲಾತಿ ಕಲ್ಪಿಸುವಲ್ಲಿ ಆಗಿರುವ ವಿಳಂಬವನ್ನು; ಹೈಕೋರ್ಟ್ ಮೆಟ್ಟಿಲು ಏರಿರುವುದನ್ನು ಸರ್ಕಾರ ನೆಪವಾಗಿ ಬಳಸಿಕೊಳ್ಳಬಹುದು. ಆದರೆ, ಆ ತೊಡಕುಗಳನ್ನು ನಿವಾರಿಸಲು, ನಿಭಾಯಿಸಲು, ನಿರ್ಧಾರಗಳನ್ನು ಕೈಗೊಳ್ಳಲು ಅಧಿಕಾರ ಎಂಬ ಬ್ರಹ್ಮಾಸ್ತ್ರವಿದೆಯಲ್ಲ? ನೆಪ ಹೇಳುವುದು, ವಿರೋಧ ಪಕ್ಷದ ಮೇಲೆ ಗೂಬೆ ಕೂರಿಸುವುದು ಸರ್ಕಾರಕ್ಕೆ ಶೋಭೆ ತರುವ ಕೆಲಸವಲ್ಲ. ಯುವಜನತೆ ಕೆಲಸವಿಲ್ಲದೆ ಕೈ ಕಟ್ಟಿ ಕೂರುವುದು ಯಾವ ರಾಜ್ಯಕ್ಕೂ, ದೇಶಕ್ಕೂ ಒಳ್ಳೆಯದನ್ನು ಮಾಡುವುದಿಲ್ಲ.

ಭ್ರಷ್ಟ ಬಿಜೆಪಿ ಹೋಗಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೂ, ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸರ್ಕಾರವು ಉದ್ಯೋಗ ಸೃಷ್ಟಿ ಮತ್ತು ನೇಮಕಾತಿ ಪ್ರಕ್ರಿಯೆ ವೇಗಗೊಳಿಸಲಿಲ್ಲ. ಬದಲಿಗೆ ರಾಜಕೀಯ ಅಸ್ಥಿರತೆ ಮತ್ತು ಅಧಿಕಾರದ ಲೆಕ್ಕಾಚಾರಗಳಲ್ಲಿ ಮುಳುಗೇಳುತ್ತಿದೆ ಎಂದು ಪ್ರತಿಭಟನಾಕಾರರು ಟೀಕಿಸಿರುವುದರಲ್ಲಿ ತಪ್ಪಿಲ್ಲ. ಹಾಗೆಯೇ ಯುವಜನರ ಹೋರಾಟವನ್ನು ತಮ್ಮ ಕ್ಷುಲ್ಲಕ ರಾಜಕೀಯ ಲಾಭಕ್ಕೆ ಬಳಸಿಕೊಳ್ಳಲು ನೋಡಿದ ಬಿಜೆಪಿ ನಾಯಕರನ್ನು ವೇದಿಕೆಗೆ ಹತ್ತದಂತೆ ನೋಡಿಕೊಂಡಿರುವುದು, ಅವರ ವಿರುದ್ಧವೂ ಧಿಕ್ಕಾರ ಕೂಗಿ, ಆಕ್ರೋಶ ವ್ಯಕ್ತಪಡಿಸಿ ಪ್ರತಿಭಟನೆಯಿಂದ ದೂರ ಇಟ್ಟಿರುವುದು ಕೂಡ ಸರಿಯಾಗಿಯೇ ಇದೆ.

ದೇಶ ಜಾಗತೀಕರಣದತ್ತ ಹೊರಳಿದ ನಂತರ, ಸರ್ಕಾರಿ ಹುದ್ದೆಗಳ ಸಂಖ್ಯೆ ಇಳಿಮುಖವಾಗತೊಡಗಿದೆ. ಖಾಸಗಿ ಕ್ಷೇತ್ರದಲ್ಲಿ ಮೀಸಲಾತಿ ಇಲ್ಲದಿರುವುದು ನಿರುದ್ಯೋಗ ಸಮಸ್ಯೆ ಉಲ್ಬಣಗೊಳ್ಳುವಂತೆ ಮಾಡಿದೆ. ಸರ್ಕಾರಿ ಹುದ್ದೆಗಳು ಭರ್ತಿಯಾಗದಿರುವುದರ ಹಿಂದೆ ಎಲ್ಲ ಪಕ್ಷಗಳ ಸಂವಿಧಾನ ವಿರೋಧಿ, ಕಾರ್ಪೊರೇಟ್ ಪರ ನೀತಿ ಅಡಗಿದೆ. ಅದಕ್ಕೆ ಪೂರಕವಾಗಿ, 2003ರಲ್ಲಿ ಕೇಂದ್ರದಲ್ಲಿ ಅಧಿಕಾರದಲ್ಲಿದ್ದ ವಾಜಪೇಯಿಯವರ ನೇತೃತ್ವದ ಬಿಜೆಪಿ ಸರ್ಕಾರ ವಿತ್ತೀಯ ಶಿಸ್ತು ಮತ್ತು ಬಜೆಟ್ ನಿರ್ವಹಣಾ ಕಾಯ್ದೆಯನ್ನು ಜಾರಿಗೆ ತಂದಿದ್ದು, ಬೇಲಿ ಮೇಲೆ ಕೂತ ಸರ್ಕಾರಗಳಿಗೆ ಅನುಕೂಲವಾಗಿದೆ. ಆ ಕಾಯ್ದೆ ಸರ್ಕಾರಿ ಹುದ್ದೆಗಳನ್ನು ಹಂತ ಹಂತವಾಗಿ ಕಡಿಮೆ ಮಾಡುತ್ತಾ ಸರ್ಕಾರಿ ವೆಚ್ಚವನ್ನು ಕಡಿಮೆ ಮಾಡಿಕೊಳ್ಳುವುದನ್ನು ಹೇಳುತ್ತದೆ.

ಕೇಂದ್ರ ಸರ್ಕಾರದ ಈ ವಿತ್ತೀಯ ಶಿಸ್ತಿನ ನೆಪವೇ ರಾಜ್ಯ ಸರ್ಕಾರಗಳಿಗೆ ಅಸ್ತ್ರವಾಗಿದೆ. ಸರ್ಕಾರಿ ನೇಮಕಾತಿಗಳನ್ನು ತಡೆಹಿಡಿದು, ಅರೆ ಕಾಲಿಕ ಅಥವಾ ಹೊರಗುತ್ತಿಗೆ ನೇಮಕಾತಿಗಳಿಗೆ ಹೆಚ್ಚಿನ ಒತ್ತು ನೀಡುತ್ತಾ ಬರತೊಡಗಿದೆ. ನಡುವೆ ಕಣ್ಣೊರೆಸುವ ತಂತ್ರವಾಗಿ ಲೋಕಸೇವಾ ಆಯೋಗ(ಕೆಪಿಎಸ್‌ಸಿ) ಕಡೆಯಿಂದ ಕೆಲ ಹುದ್ದೆಗಳನ್ನು ತುಂಬತೊಡಗಿದೆ. ಆದರೆ ಆ ಭ್ರಷ್ಟ, ಜಾತಿಕೂಪ ಕೆಪಿಎಸ್‌ಸಿಯಿಂದ ಕೆಲಸ ಗಿಟ್ಟಿಸುವುದು, ಆದೇಶಪತ್ರ ಪಡೆಯುವುದು ಪಾತಾಳ ಮುಟ್ಟಿಬಂದರೂ ಸಿಗದಾಗಿದೆ. ನ್ಯಾಯಾಲಯ, ಕಾನೂನು ಮತ್ತು ಸರಕಾರದ ಭಯವೇ ಇಲ್ಲದ ಆ ನಿಷ್ಕ್ರಿಯ ಸಂಸ್ಥೆಯನ್ನು ಶಾಶ್ವತವಾಗಿ ಮುಚ್ಚುವುದೇ ಉತ್ತಮವೆಂಬುದು ಎಲ್ಲರ ಅಭಿಮತವಾಗಿದೆ.

ಸೋಜಿಗದ ಸಂಗತಿ ಎಂದರೆ, ಸಿದ್ದರಾಮಯ್ಯನವರ ಸರ್ಕಾರ ವಿತ್ತೀಯ ಶಿಸ್ತಿನ ನೆಪದಲ್ಲಿ ಉದ್ಯೋಗಾಕಾಂಕ್ಷಿಗಳ ಸರ್ಕಾರಿ ನೇಮಕಾತಿಗಳಿಗೆ ಕೊಕ್ಕೆ ಹಾಕಿತು. ಆದರೆ, ಪಕ್ಷದ ಶಾಸಕರು ಮತ್ತು ಕಾರ್ಯಕರ್ತರನ್ನು ಸಂತುಷ್ಟರನ್ನಾಗಿಸಲು, ಅನಗತ್ಯವಾಗಿ ಸಂಪುಟದರ್ಜೆ ಹುದ್ದೆಗಳನ್ನು ಸೃಷ್ಟಿಸಿತು. ನಿಗಮಮಂಡಳಿ ಅಧ್ಯಕ್ಷರಿಗೆ ರಾಜ್ಯ ಸಂಪುಟದರ್ಜೆ ಸ್ಥಾನಮಾನ ನೀಡಿತು. ಸದ್ಯ 55 ಜನಕ್ಕೆ ಕ್ಯಾಬಿನೆಟ್ ದರ್ಜೆ ಸ್ಥಾನಮಾನ ನೀಡಿ ಆದೇಶ ಮಾಡಿರುವ ಸರ್ಕಾರ; ವೇತನ, ಆತಿಥ್ಯ ಭತ್ಯೆ, ನಿವಾಸ ಬಾಡಿಗೆ, ಪೆಟ್ರೋಲ್, ಸಿಬ್ಬಂದಿ ಸಂಬಳವೆಂದು ವಾರ್ಷಿಕವಾಗಿ ಅಂದಾಜು 22 ಕೋಟಿ ರೂ.ಗಳನ್ನು ವ್ಯಯಿಸುತ್ತಿದೆ.

ರಾಜ್ಯ ಸರ್ಕಾರದ ಈ ದುಂದುವೆಚ್ಚವನ್ನು ಬಲ್ಲ ಜೆಡಿಎಸ್ ಮುಖಂಡ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿಯವರು, ರಾಜ್ಯದಲ್ಲಿ 2.94 ಲಕ್ಷ ಸರಕಾರಿ ಹುದ್ದೆಗಳು ಖಾಲಿ ಬಿದ್ದಿವೆ. ಸಂಪುಟದರ್ಜೆ ಹುದ್ದೆಗಳು ಮಾತ್ರ ಸೂಪರ್ ಫಾಸ್ಟ್ ಆಗಿ ಭರ್ತಿ ಆಗುತ್ತಿವೆ. ಕಾಂಗ್ರೆಸ್ ಸರ್ಕಾರದ ಆದ್ಯತೆ ಏನು ಎಂಬುದು ಅರ್ಥವಾಗುತ್ತದೆ ಎಂದು ವ್ಯಂಗ್ಯವಾಡಿದ್ದಾರೆ. ಮುಂದುವರೆದು, ಬೆಂಗಳೂರು ನಗರದ 18 ಆಯಕಟ್ಟಿನ ಪೊಲೀಸ್ ಠಾಣೆಗಳಲ್ಲಿ ಇನ್‌ಸ್ಪೆಕ್ಟರ್‌ಗಳೇ ಇಲ್ಲ. ವರ್ಗಾವಣೆ ದಂಧೆಯಲ್ಲಿ ಸರಕಾರ ಮುಳುಗಿದ್ದರ ಪರಿಣಾಮವಿದು ಎಂದು, ವರ್ಗಾವಣೆಯ ಕರಾಳ ರೂಪವನ್ನೂ ತೆರೆದಿಟ್ಟಿದ್ದಾರೆ.

ಇದಕ್ಕೆ ಪೂರಕವಾಗಿ ಸರ್ಕಾರವೇ ನೇಮಿಸಿದ ಆರ್.ವಿ. ದೇಶಪಾಂಡೆ ಅವರ ಅಧ್ಯಕ್ಷತೆಯ ಕರ್ನಾಟಕ ಆಡಳಿತ ಸುಧಾರಣೆ ಆಯೋಗ, ರಾಜ್ಯದಲ್ಲಿ 7 ಲಕ್ಷ ನಿರುದ್ಯೋಗಿಗಳಿದ್ದಾರೆ ಎಂದು ವರದಿ ನೀಡಿದೆ. ಈ ನಿರುದ್ಯೋಗಿಗಳು ಸರಕಾರಿ ಹುದ್ದೆಗಳ ನಿರೀಕ್ಷೆಯಲ್ಲಿದ್ದು, ಖಾಲಿ ಹುದ್ದೆಗಳನ್ನು ಸರಕಾರ ಹಂತ ಹಂತವಾಗಿ ಭರ್ತಿ ಮಾಡಬೇಕಿತ್ತು. ಆದರೆ ಕುರ್ಚಿ ಕಿತ್ತಾಟದಲ್ಲಿ ಕಾಂಗ್ರೆಸ್ ನಾಯಕರು ಅಮೂಲ್ಯವಾದ 3 ವರ್ಷಗಳನ್ನು ಪೋಲು ಮಾಡಿದ್ದಾರೆ. ಈಗಲಾದರೂ ಆಡಳಿತಗಾರರು ಎಚ್ಚೆತ್ತು ಬಜೆಟ್ಟಿನಲ್ಲಿ ಪ್ರತ್ಯೇಕ ಹಣ ಇರಿಸಿ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಬೇಕಿದೆ.

ನಿರುದ್ಯೋಗ ಎನ್ನುವುದು ಸರಳ ಸಮಸ್ಯೆ ಅಲ್ಲ. ಅದು ಸದಾ ಕುದಿಯುವ ಜ್ವಾಲಾಮುಖಿ. ಧಾರವಾಡದ ನಿರುದ್ಯೋಗಿ ಯುವಜನರು ಶ್ರೀಮಂತರ ಮಕ್ಕಳಲ್ಲ, ಬಡವರ ಮಕ್ಕಳು. ಅವರ ಕಷ್ಟ, ಸಂಕಟ, ಹತಾಶೆ ಈಗ ಸ್ಫೋಟಗೊಂಡಿದೆ. ನಾಗರಿಕ ಸಮಾಜ ಅವರ ಬೆಂಬಲಕ್ಕೆ ನಿಲ್ಲಬೇಕಿದೆ. ಸರ್ಕಾರ ಎಚ್ಚೆತ್ತುಕೊಳ್ಳದಿದ್ದರೆ, ಯುವಜನರ ಕೈಗೆ ಕೆಲಸ ಕೊಡದಿದ್ದರೆ ಬದ್ಧತೆ, ಸಮಾನತೆ, ಸ್ವಾವಲಂಬಿ ಪದಗಳು ಅರ್ಥ ಕಳೆದುಕೊಳ್ಳುತ್ತವೆ. ಅವುಗಳನ್ನಾಡುವ ನಾಯಕರು ನಗಣ್ಯರಾಗುತ್ತಾರೆ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಜುದಾಯಿಸಂ, ಇಸ್ಲಾಂ, ಹಿಂದೂಯಿಸಂ, ಮೋದಿ, ನೆತನ್ಯಾಹು ಮತ್ತು ಟ್ರಂಪ್: ಒಂದಿಷ್ಟು ಟಿಪ್ಪಣಿಗಳು

ಶೀಘ್ರದಲ್ಲೇ ಇರಾನ್ ಮೇಲೆ ಇಸ್ರೇಲ್ ಮತ್ತು ಅಮೆರಿಕ ಯುದ್ಧ ಮಾಡುವ ಸಾಧ್ಯತೆ ದಟ್ಟವಾಗಿದೆ. ಈ ಯುದ್ಧದಲ್ಲಿ ಭಾರತವು ಅಮೆರಿಕದ ಪರವಾಗಿ ನಿಲ್ಲಲಿದೆ, ಭಾರತದ ಪುರಾತನ ಮಿತ್ರ ಇರಾನ್‌ಗೆ ಮೋದಿ ದ್ರೋಹ ಬಗೆಯುವುದು ಖಚಿತವಾಗಿದೆ ಎನ್ನುವುದಕ್ಕೆ ಇಸ್ರೇಲಿನ ಈ ಭೇಟಿ ಮುನ್ಸೂಚನೆಯಾಗಿದೆ.

ಪ್ರಧಾನಿ ನರೇಂದ್ರ ಮೋದಿ ಫೆಬ್ರುವರಿ 25/26ರಂದು ಎರಡು ದಿನಗಳ ಇಸ್ರೇಲ್ ಪ್ರವಾಸ ಮಾಡಿದ್ದಾರೆ. ಅಲ್ಲಿ ಅವರು ಪಾರ್ಲಿಮೆಂಟ್‌ನಲ್ಲಿ ಮಾಡಿದ ಭಾಷಣದಲ್ಲಿ ''ಇಸ್ರೇಲ್ ನಮ್ಮ ಪಿತೃದೇಶ: ಭಾರತ ನಮ್ಮ ಮಾತೃದೇಶ''ವೆಂದು ಹೇಳಿದ್ದಾರೆ- ಎನ್ನುವ ಇಂಗ್ಲಿಷ್ ಕೊಟೇಶನ್ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗ್ತಿದೆ.

ಮೋದಿ ತಮ್ಮ ಭಾಷಣದಲ್ಲಿ ಹೇಳಿದ್ದು ಹೀಗಿದೆ: ''ಇಸ್ರೇಲ್ ತಮ್ಮ ತಂದೆಯ ಭೂಮಿ ಎಂದು ಮತ್ತು ಭಾರತ ತಮ್ಮ ತಾಯಿಯ ಭೂಮಿ ಎಂದು ಅವರು ದೃಢವಾಗಿ ನಂಬಿದ್ದಾರೆ. ನಾವು ಅವರ ಬಗ್ಗೆ ಹೆಮ್ಮೆಪಡುತ್ತೇವೆ.''

ಇಲ್ಲಿ ಮೋದಿ ''ಅವರು'' ಎಂದು ಹೇಳಿದ್ದು ಭಾರತದಿಂದ ಇಸ್ರೇಲಿಗೆ ವಲಸೆ ಹೋದ ಯೆಹೂದಿಯರ ಬಗ್ಗೆ; ತಮ್ಮ ಬಗ್ಗೆ ಅಲ್ಲ.(ಮೋದಿಯವರು ವಿಪರೀತ ಸುಳ್ಳುಗಳನ್ನು ಹೇಳಿದ್ದಾರೆ ಅನ್ನುವುದು ನಿಜ. ಹಾಗೆಂದು ಅವರ ಹೇಳಿಕೆಯನ್ನು ನಾವೂ ತಿರುಚಿ ಬರೆಯುವುದು ಬೇಡವೆಂದು ಆರಂಭದಲ್ಲೇ ಇದನ್ನು ಸೂಚಿಸಿದ್ದೇನೆ.)

ಇರಲಿ, ಇಲ್ಲಿ ನಾನು ಹೇಳಬೇಕಾದ ಸಂಗತಿ ಅದಲ್ಲ. ಈ ಗಳ ಬಗ್ಗೆ ಯೋಚಿಸುವಾಗ ಯೆಹೂದಿ ಧರ್ಮ (ಜುದಾಯಿಸಂ), ಇಸ್ಲಾಂ ಧರ್ಮ ಮತ್ತು ಹಿಂದೂ ಧರ್ಮಗಳಲ್ಲಿ ಕಂಡು ಬರುವ ಹಲವು ಸಾಮ್ಯತೆಗಳ ಬಗ್ಗೆ.

ಮೊದಲು ಜುದಾಯಿಸಂ ಮತ್ತು ಇಸ್ಲಾಂ ಕುರಿತು ಗಮನಿಸೋಣ.

ಬನೀ ಇಸ್ರಾಯೀಲ್ ಸಂತತಿ ಮತ್ತು ಪ್ರವಾದಿಗಳ ಬಗ್ಗೆ ಕುರಾನ್‌ನಲ್ಲಿ ವಿವರವಾಗಿ ವರ್ಣಿಸಲಾಗಿದೆ. ಎರಡೂ ಅಬ್ರಹಾಮ್ ಧರ್ಮಗಳು. ಯಹೂದಿ ದೊರೆಗಳಾದ ಮತ್ತು ಇಬ್ಬರೂ ಮುಸ್ಲಿಮರು ಒಪ್ಪಿಕೊಂಡಿರುವ ದೇವರ ಪ್ರವಾದಿಗಳು. ಸುಲೈಮಾನ್ ಮತ್ತು ದಾವೂದ್ ಎಂದು ಕುರಾನ್‌ನಲ್ಲಿ ಇವರ ವಿವರವಾದ ಪ್ರಸ್ತಾಪ ಇದೆ. ಇವರಿಬ್ಬರ ಹೆಸರನ್ನೂ ಹೇಳುವಾಗ ಮುಸ್ಲಿಮರು ಅಲೈಸ್ಸಲಾಂ ಎಂದು ಸಲಾಂ ಹೇಳುತ್ತಾರೆ.

''ಅಬ್ರಹಾಂ ಮೂಲದ ಧರ್ಮ''ಗಳ ಬಗ್ಗೆ (ಕ್ರಿಶ್ಚಿಯಾನಿಟಿ, ಜುದಾಯಿಸಂ ಮತ್ತು ಇಸ್ಲಾಂ) ಜಾಗತಿಕ ಇತಿಹಾಸದಲ್ಲಿ ಸಾಕಷ್ಟು ಚರ್ಚೆ ನಡೆದಿದೆ. ಈಗಲೂ ನಡೆಯುತ್ತಿದೆ.

ಯಹೂದಿಗಳದ್ದು ಏಕದೇವತ್ವದ ಧರ್ಮ. ಅವರ ಪ್ರಕಾರ, ದೇವರು ಒಬ್ಬನೇ, ಅವನಿಗೆ ಯಾವ ಪಾಲುದಾರರೂ ಇಲ್ಲ, ಭೌತಿಕ ರೂಪವಿಲ್ಲ (ನಿರಾಕಾರ). ಹೀಗಾಗಿಯೇ ಯಹೂದಿಯರು ಮೂರ್ತಿಪೂಜೆ ಮಾಡುವುದಿಲ್ಲ.

ಮುಸ್ಲಿಮರದ್ದೂ ಏಕದೇವತ್ವದ ಪ್ರತಿಪಾದನೆ. ದೇವರು (ಅಲ್ಲಾಹ್) ನಿರಾಕಾರ, ಸ್ವಯಂಸಂಪೂರ್ಣ, ಸರ್ವಶಕ್ತ, ಆತನಿಗೆ ಯಾವ ಪಾಲುದಾರರೂ ಇಲ್ಲ. ಮುಸ್ಲಿಮರೂ ಮೂರ್ತಿಪೂಜೆ



ಮಾಡುವುದಿಲ್ಲ.

ಈ ಹಿನ್ನೆಲೆಯಲ್ಲಿ ಫೆಲಿಸ್ತೀನ್ ಮತ್ತು ಇಸ್ರೇಲ್ ನಡುವಣ ಈಗಿನ ರಾಜಕೀಯ ಘರ್ಷಣೆಯನ್ನು ವಿಶ್ಲೇಷಿಸಲಾಗುತ್ತಿದೆ. ಈಗಿನ ಇಸ್ರೇಲ್ ದೇಶದ ಭೂಭಾಗವನ್ನು ತಮಗೆ ''ದೇವರು ನೀಡಿರುವ ವಾಗ್ದಾನ'' ಎಂದು ಯಹೂದಿಯರು ನಂಬಿದ್ದಾರೆ. ತಮ್ಮ ಭೂಮಿಯನ್ನು ಅಮೆರಿಕದ ಮಿಲಿಟರಿ ಬಲದ ಮೂಲಕ ಇಸ್ರೇಲ್ ಅತಿಕ್ರಮಿಸಿದೆ ಎಂದು ಫೆಲಿಸ್ತೀನೀಯರು ಹೇಳುತ್ತಿದ್ದಾರೆ.

ಈ ಅತಿಕ್ರಮಣ 20/21 ನೇ ಶತಮಾನದ ವಾಸ್ತವ ಇತಿಹಾಸ. ಅದನ್ನು ಇಲ್ಲಿ ಚರ್ಚಿಸುವುದು ನನ್ನ ಉದ್ದೇಶ ಅಲ್ಲ.

ಇಲ್ಲಿ ನನ್ನ ಕುತೂಹಲ ಬೇರೆಯೇ ಇದೆ.

ಈ ''ಅಬ್ರಹಾಮ್'' ಮತ್ತು ಹಿಂದೂ ಧರ್ಮದ ''ಬ್ರಹ್ಮ'' ಎಂಬ ಶಬ್ದಗಳ ಸಾಮ್ಯತೆಯ ಕುರಿತು ಹಲವರು ಲೇಖಕರು ಬೆಳಕು ಚೆಲ್ಲಿದ್ದಾರೆ. ಹಾಗೆಯೇ ಪ್ರವಾದಿ ಅಬ್ರಹಾಂ (ಇಬ್ರಾಹಿಂ) ಬಗ್ಗೆ ಬೈಬಲ್ (ಕ್ರಿಶ್ಚಿಯನ್ನರ ಧರ್ಮಗ್ರಂಥ) ತೌರಾತ್ (ತೋರತ್- ಯಹೂದಿಯರ ಧರ್ಮಗ್ರಂಥ) ಮತ್ತು ಕುರಾನ್ (ಮುಸ್ಲಿಮರ ಧರ್ಮಗ್ರಂಥ)ಗಳಲ್ಲಿ ಸಾಕಷ್ಟು ವಿವರಗಳಿವೆ.

ಹಿಂದೂ ಧರ್ಮದಲ್ಲೂ ಪರಮಾತ್ಮನ ಪರಿಕಲ್ಪನೆಯ ಬಗ್ಗೆ ವಿವರಿಸುವಾಗ ಸನಾತನ, ಚಿರಂತನ, ಆಕಾರಾತೀತ, ಸ್ವಯಂಭೂ ಎನ್ನುವ ವರ್ಣನೆಗಳನ್ನು ಕೇಳಿದ್ದೇನೆ/ಓದಿದ್ದೇನೆ.

ನಮ್ಮ ಭಾರತದಲ್ಲಿ ಹತ್ತಾರು ಧರ್ಮಗಳು, ಧಾರ್ಮಿಕ ಫಿಲಾಸಫಿಗಳು, ಆಧ್ಯಾತ್ಮಿಕ ವಿಚಾರಧಾರೆಗಳ ಶ್ರೀಮಂತ ಪರಂಪರೆ ಇದೆ. ಆದರೆ ಬಲವಾದ ಗಳಿಲ್ಲ. ಇದ್ದಿದ್ದರೆ ಈ ವಿಷಯಗಳ ಬಗ್ಗೆ ಕುತೂಹಲಕರ ಚರ್ಚೆ ನಡೆಯಬಹುದಿತ್ತು. (ಇಂತಹ ಗಳಿದ್ದರೂ ಈ ಕುರಿತು ಸಮಾಧಾನದಿಂದ ಜಿಜ್ಞಾಸೆ ಮಾಡುವ ವಾತಾವರಣ ಈಗ ಇಲ್ಲ ಅನ್ನೋದು ಬೇರೆ ವಿಷಯ.)

ಭಾರತ ನಿಜವಾದ ಅರ್ಥದಲ್ಲಿ ವಸುದೈವ ಕುಟುಂಬಕಂ. ಆದರೆ ''ಧರ್ಮ ರಾಜಕೀಯ''ದ ರಾಡಿಯಲ್ಲಿ ಈ ವಿಷಯ ಮಾತಾಡೋದೇ ತಪ್ಪು ಎನ್ನುವಂತಹ ವಾತಾವರಣ ಈಗ ನಿರ್ಮಾಣವಾಗಿದೆ.

ಇರಲಿ. ಈಗ ಮೋದಿಯವರ ಇಸ್ರೇಲ್ ಭೇಟಿ ಮತ್ತು ಭಾಷಣದ ಬಗ್ಗೆ ಒಂದು ಮಾತು.

ಫೆಲಿಸ್ತೀನಿನ ಹಮಾಸ್ ಬಂಡುಕೋರರು ಇಸ್ರೇಲ್ ಮೇಲೆ ದಾಳಿ ನಡೆಸಿ ಸುಮಾರು 2000ಕ್ಕೂ ಹೆಚ್ಚು ಜನರನ್ನು ಕೊಲೆ ಮಾಡಿದರು. ಇದರಲ್ಲಿ ನೂರಾರು ಮಹಿಳೆಯರು ಮತ್ತು ಮಕ್ಕಳು ಸೇರಿದ್ದಾರೆ. ಇದಕ್ಕೆ ಪ್ರತೀಕಾರವಾಗಿ ಇಸ್ರೇಲ್ ಮಿಲಿಟರಿಯು ಫೆಲಿಸ್ತೀನಿನ ಮೇಲೆ ದಾಳಿ ನಡೆಸಿ 50,000ಕ್ಕೂ ಹೆಚ್ಚು ಜನರನ್ನು ನರಮೇಧ ನಡೆಸಿತು. ಇದರಲ್ಲೂ ಮಹಿಳೆಯರು ಮತ್ತು ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. 16,000ಕ್ಕೂ ಹೆಚ್ಚು ಮಕ್ಕಳು ಫೆಲಿಸ್ತೀನ್ ನರಮೇಧದಲ್ಲಿ ಸಾವಿಗೀಡಾಗಿದ್ದಾರೆ ಎಂದು ರೆಡ್ ಕ್ರಾಸ್ ವರದಿ ಹೇಳಿದೆ.

ಮೋದಿಯವರು ಇಸ್ರೇಲಿಗೆ ಹೋಗಿ ಹಮಾಸ್ ನಡೆಸಿದ ಇಸ್ರೇಲಿಗರ ಕೊಲೆಗೆ ಸಂತಾಪ ವ್ಯಕ್ತಪಡಿಸಿದ್ದಾರೆ. ಫೆಲಿಸ್ತೀನಿಗೆ ಹೋಗಿ ಅಲ್ಲಿಯೂ ಹೀಗೆ ಅವರು ಸಂತಾಪ ವ್ಯಕ್ತಪಡಿಸುವ ಸಾಧ್ಯತೆ ಇಲ್ಲ. ಏಕೆಂದರೆ ಅವರು ''ವಸುದೈವ ಕುಟುಂಬಕಂ'' ತತ್ವದ ಮೇಲೆ ಯಥಾರ್ಥ ನಂಬಿಕೆ ಇರುವ ವ್ಯಕ್ತಿಯಲ್ಲ. ಅವರದ್ದೇನಿದ್ದರೂ ತೋರಿಕೆಯ ಧಾರ್ಮಿಕತೆ.

ಮೋದಿಯವರ ಈ ಇಸ್ರೇಲ್ ಭೇಟಿಯ ಮೂಲಕ ಭಾರತ ತನ್ನ ಅಲಿಪ್ತ ನೀತಿಗೆ ಅಂತಿಮ ಶ್ರದ್ಧಾಂಜಲಿ ಅರ್ಪಿಸಿದೆ. ಇಸ್ರೇಲಿನ ಕೊಲೆಗಡುಕ ಪ್ರಧಾನಿ ನೆತನ್ಯಾಹು ಅಪ್ಪುಗೆಗೆ ಮೋದಿ ಒಳಗಾಗಿದ್ದಾರೆ. ಇಲ್ಲಿ ಗುಜರಾತ್ ನರಮೇಧದ ನೆನಪು ಬೇಡವೆಂದರೂ ಬರುತ್ತಿದೆ. ಹೀಗಾಗಿ ಇದನ್ನು ''ಸಮಾನ ಮನಸ್ಕರ ಭೇಟಿ'' ಎಂದೇ ಹೇಳಬಹುದು.

ಮೋದಿ ಮತ್ತು ನೆತನ್ಯಾಹು

ಈ ಭೇಟಿಯ ಹಿನ್ನೆಲೆಯಲ್ಲಿ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಒತ್ತಡ ಇದೆ ಎನ್ನುವ ವಿಶ್ಲೇಷಣೆಯೂ ನಡೆದಿದೆ. ಟ್ರಂಪ್ ಒತ್ತಡದಿಂದ ಹೊರಬರಲು ಮೋದಿಗೆ ಸಾಧ್ಯವಾಗುತ್ತಿಲ್ಲ ಎನ್ನುವುದು ಉಭಯ ದೇಶಗಳ ಟ್ರೇಡ್ ಡೀಲ್‌ನಲ್ಲಿ ಈಗಾಗಲೇ ಸ್ಪಷ್ಟವಾಗಿದೆ.

ಈ ಮಧ್ಯೆ ಎಪ್‌ಸ್ಟೀನ್ ಫೈಲ್‌ನ ಕೆಸರು ಮೋದಿ ಸಂಪುಟದ ಸಚಿವರ ಮೇಲೂ ಬಿದ್ದಿದೆ. ಮೋದಿ ಗೆಳೆಯ ಅನಿಲ್ ಅಂಬಾನಿಯೂ ಈ ಕೆಸರಿನಲ್ಲಿ ಸಿಕ್ಕುಬಿದ್ದಿದ್ದಾರೆ. ಈ ಫೈಲ್‌ನಲ್ಲಿ ಭಾರತದ ಇನ್ಯಾರ ಹೆಸರು ಹೊರಬರುತ್ತದೋ ಗೊತ್ತಿಲ್ಲ. ಅನುಮಾನದ ಸುಂಟರಗಾಳಿ ಜೋರಾಗಿ ಬೀಸುತ್ತಿದೆ.

ಮೋದಿ ತೀವ್ರ ಒತ್ತಡಕ್ಕೆ ಒಳಗಾಗಿದ್ದಾರೆ. ಈ ಒತ್ತಡದ ಹಿನ್ನೆಲೆಯಲ್ಲಿ ಇಸ್ರೇಲ್ ಭೇಟಿ ನಡೆದಿದೆ ಎನ್ನುವ ಅನುಮಾನ ಬಲವಾಗಿದೆ.

ಶೀಘ್ರದಲ್ಲೇ ಇರಾನ್ ಮೇಲೆ ಇಸ್ರೇಲ್ ಮತ್ತು ಅಮೆರಿಕ ಯುದ್ಧ ಮಾಡುವ ಸಾಧ್ಯತೆಯೂ ದಟ್ಟವಾಗಿದೆ. ಈ ಯುದ್ಧದಲ್ಲಿ ಭಾರತವು ಅಮೆರಿಕದ ಪರವಾಗಿ ನಿಲ್ಲಲಿದೆ ಎನ್ನುವುದಕ್ಕೆ ಇಸ್ರೇಲಿನ ಈ ಭೇಟಿ ಮುನ್ಸೂಚನೆಯಾಗಿದೆ.

ಅಂದರೆ, ತೈಲ ಸಂಕಷ್ಟದ ಕಾಲದಲ್ಲಿ ಭಾರತಕ್ಕೆ ಕಡಿಮೆ ದರದಲ್ಲಿ ನಿರಂತರವಾಗಿ ಕಚ್ಚಾ ತೈಲ ಪೂರೈಸಿದ; ಅದನ್ನೂ ಭಾರತದ ರೂಪಾಯಿ ವಿನಿಮಯದಲ್ಲೇ ನೀಡಿ ನಮ್ಮ ರೂಪಾಯಿ ಶಕ್ತಿ ಹೊಂದಲು ನೆರವಾದ ಭಾರತದ ಪುರಾತನ ಮಿತ್ರ ಇರಾನ್‌ಗೆ ಮೋದಿ ದ್ರೋಹ ಬಗೆಯುವುದು ಖಚಿತ ಎಂದು ಕಾಣಿಸುತ್ತಿದೆ.

ಏನಿದು ಕಾಶ್ಮೀರದ ಕುನನ್ - ಪೋಶ್ಪೋರ ಕಗ್ಗತ್ತಲ ರಾತ್ರಿ’? ಎಬಿವಿಪಿ ತಗಾದೆ ಯಾಕೆ?

ಕಗ್ಗತ್ತಲೆಯ ಛಾಯೆಯು ಇಂದಿಗೂ ಕಾಶ್ಮೀರಿ ಮಹಿಳೆಯರ ಹೋರಾಟದ ಪ್ರತೀಕವಾಗಿ ನಿಲ್ಲುತ್ತದೆ ಮತ್ತು ಇದನ್ನು ಕೆಲವು ಸಂದರ್ಭಗಳಲ್ಲಿ 'ಡಾರ್ಕ್ ನೈಟ್' ಎಂಬ ಸಾರ್ಕಾಸ್ಟಿಕ್ ಅಥವಾ ಡಾರ್ಕ್ ಹ್ಯೂಮರ್ ರೂಪದಲ್ಲಿ ಉಲ್ಲೇಖಿಸಲಾಗುತ್ತದೆ. ರಕ್ಷಕರು ಎಂದುಕೊಂಡವರೇ ಕ್ರೌರ್ಯದ ಕತ್ತಲೆಯನ್ನು ಹರಡಿದರು ಎಂಬ ಆರೋಪವನ್ನು ಸೂಚಿಸುತ್ತಾ, ಘಟನೆಯ ಹಿನ್ನೆಲೆಯನ್ನು ನೋಡೋಣ.

ಬೆಂಗಳೂರಿನ ಸರ್ಜಾಪುರದಲ್ಲಿರುವ ವಿಶ್ವ ಪ್ರಖ್ಯಾತ ವಿದ್ಯಾಸಂಸ್ಥೆಯಾಗಿದೆ ಅಜೀಂ ಪ್ರೇಮ್‌ಜಿ ವಿದ್ಯಾಸಂಸ್ಥೆ. ಈ ವಿದ್ಯಾಸಂಸ್ಥೆಯು ಶಿಕ್ಷಣದಲ್ಲಿ ಹೊಸ ಹೊಸ ವಿಚಾರಗಳನ್ನು ಒಳಗೊಂಡು ಮುನ್ನಡೆಯುತ್ತಿರುವ ಕಾರಣಕ್ಕೆ ಪ್ರಖ್ಯಾತಗೊಂಡಿದೆ. ಎಲ್ಲಿಯವರೆಗೆಂದರೆ ಕೇಂದ್ರ ಸರ್ಕಾರ ರೂಪಿಸಿದ ಹೊಸ ಶಿಕ್ಷಣ ನೀತಿ ( )ಯ ತಂಡದಲ್ಲಿ ಅಜೀಂ ಪ್ರೇಮ್‌ಜಿ ಸಂಸ್ಥೆಯ ಉಪನ್ಯಾಸಕರೊಬ್ಬರು ಸ್ಥಾನ ಪಡೆದಿದ್ದರು. ಇಂತಹ ಹೆಗ್ಗಳಿಕೆ ಇರುವ ಅಜೀಂ ಪ್ರೇಮ್‌ಜಿ ವಿದ್ಯಾರ್ಥಿಗಳಿಗೆ ಎಲ್ಲಾ ವಿಚಾರಗಳ ಕುರಿತು ಜ್ಞಾನ ಹೊಂದಿರಬೇಕೆಂಬ ಉದ್ದೇಶದಿಂದ ಬಹಳಷ್ಟು ವಿಚಾರಗಳನ್ನು ವಿದ್ಯಾರ್ಥಿಗಳ ಶಿಕ್ಷಣದಲ್ಲಿ ಸೇರ್ಪಡೆ ಮಾಡಿ ವಿದ್ಯಾರ್ಥಿಗಳನ್ನು ಅಭಿವೃದ್ಧಿಪಡಿಸುತ್ತದೆ. ಅದೇ ಉದ್ದೇಶದ ಭಾಗವಾಗಿ ಆಗಿದೆ ಕುನನ್ ಪೋಶ್ಪೋರ ಕಗ್ಗತ್ತಲ ರಾತ್ರಿ ಎಂಬ ವಿಷಯದ ಕುರಿತು ಚರ್ಚೆ ಹಮ್ಮಿಕೊಂಡಿರುವುದು.

ಯಾವುದೇ ವಿಚಾರದ ಕುರಿತು ಋಣಾತ್ಮಕ ಮತ್ತು ಸಕಾರಾತ್ಮಕ ಚರ್ಚೆ ನಡೆಸಿ ಅಧ್ಯಾಪಕರು ಸಮಾರೋಪಗೊಳಿಸುವುದು ಸಾಮಾನ್ಯ. ಆ ನಡುವೆ ಎಬಿವಿಪಿ ತಗಾದೆ ಎಬ್ಬಿಸಲು ಶಿಕ್ಷಣ ಸಂಸ್ಥೆ ಮೇಲೆ ದಾಳಿ ಮಾಡಲು ಮುಂದಾಗಿದೆ. ಅಷ್ಟಕ್ಕೂ ಎಬಿವಿಪಿ ರೊಚ್ಚಿಗೇಳಲು ಕಾರಣವೇನೆಂದು ತಿಳಿಯಬೇಕಾದರೆ ಕುನನ್ ಪೋಶ್ಪೋರ ಡಾರ್ಕ್ ನೈಟ್ ಕುರಿತು ತಿಳಿಯಬೇಕು!


ಕಾಶ್ಮೀರದ ಕಪ್ವಾರ ಜಿಲ್ಲೆಯಲ್ಲಿ ಸ್ಥಿತವಾಗಿರುವ ಕುನನ್ ಮತ್ತು ಪೋಶ್ಪೋರ ಎಂಬ ಎರಡು ಸಣ್ಣ ಹಳ್ಳಿಗಳು, 1991ರ ಫೆಬ್ರವರಿ 23ರ ಆ ಚಳಿಯ ರಾತ್ರಿಯನ್ನು ಇಂದಿಗೂ ಮರೆಯಲು ಸಾಧ್ಯವಿಲ್ಲ. ಆ ರಾತ್ರಿ, ಭಾರತೀಯ ಸೇನೆಯ ಸೈನಿಕರು ಹಳ್ಳಿಗಳನ್ನು ಸುತ್ತುವರಿದು ಹುಡುಕಾಟ ನಡೆಸಿದ ಹೆಸರಿನಲ್ಲಿ ನಡೆದ ಘಟನೆಯು, ಕಾಶ್ಮೀರದ ಇತಿಹಾಸದಲ್ಲಿ ಒಂದು ಕಪ್ಪು ಅಧ್ಯಾಯವಾಗಿ ಉಳಿದಿದೆ. ಈ ಘಟನೆಯನ್ನು ಹಲವರು ''ಕುನನ್ ಪೋಶ್ಪೋರ ಮಾಸ್ ರೇಪ್'' ( ) ಎಂದು ಬಣ್ಣಿಸಿದ್ದಾರೆ ಮತ್ತು ಇದರಲ್ಲಿ ಸಾಮೂಹಿಕ ಅತ್ಯಾಚಾರದ ಆರೋಪಗಳು ಭಾರತೀಯ ಸೇನೆಯ ಮೇಲೆ ಬಿದ್ದಿವೆ.

ಈ ಘಟನೆಯ ಕಗ್ಗತ್ತಲೆಯ ಛಾಯೆಯು ಇಂದಿಗೂ ಕಾಶ್ಮೀರಿ ಮಹಿಳೆಯರ ಹೋರಾಟದ ಪ್ರತೀಕವಾಗಿ ನಿಲ್ಲುತ್ತದೆ ಮತ್ತು ಇದನ್ನು ಕೆಲವು ಸಂದರ್ಭಗಳಲ್ಲಿ ಡಾರ್ಕ್ ನೈಟ್ ಎಂಬ ಸಾರ್ಕಾಸ್ಟಿಕ್ ಅಥವಾ ಡಾರ್ಕ್ ಹ್ಯೂಮರ್ ರೂಪದಲ್ಲಿ ಉಲ್ಲೇಖಿಸಲಾಗುತ್ತದೆ. ರಕ್ಷಕರು ಎಂದುಕೊಂಡವರೇ ಕ್ರೌರ್ಯದ ಕತ್ತಲೆಯನ್ನು ಹರಡಿದರು ಎಂಬ ಆರೋಪವನ್ನು ಸೂಚಿಸುತ್ತಾ, ಘಟನೆಯ ಹಿನ್ನೆಲೆಯನ್ನು ನೋಡೋಣ.

1990ರ ದಶಕದ ಆರಂಭದಲ್ಲಿ ಕಾಶ್ಮೀರದಲ್ಲಿ ಸ್ವಾತಂತ್ರ್ಯ ಕಾಶ್ಮೀರ ಹೋರಾಟದ ಚಟುವಟಿಕೆಗಳು ತೀವ್ರಗೊಂಡಿದ್ದವು. ಭಾರತೀಯ ಸೇನೆಯು ಈ ಪ್ರದೇಶದಲ್ಲಿ ಹೋರಾಟಗಾರರ ಮೇಲೆ ಉಗ್ರ ಚಟುವಟಿಕೆಯ ಆರೋಪ ಹಾಕಿ ಅದರಲ್ಲಿ ಭಾಗವಹಿಸುವವರನ್ನು ಹುಡುಕುವ ಸಲುವಾಗಿ ಹಲವು ಹುಡುಕಾಟ ಕಾರ್ಯಾಚರಣೆಗಳನ್ನು ನಡೆಸುತ್ತಿತ್ತು. ಫೆಬ್ರವರಿ 23, 1991ರಂದು, ಕಪ್ವಾರದ ಕುನನ್ ಮತ್ತು ಪೋಶ್ಪೋರಾ ಹಳ್ಳಿಗಳಲ್ಲಿ ಸೇನೆಯ 4ನೇ ರೈಫಲ್ಸ್ ಘಟಕದ ಸೈನಿಕರು ಸುಮಾರು 300ಕ್ಕೂ ಹೆಚ್ಚು ಸಂಖ್ಯೆಯಲ್ಲಿ ಹುಡುಕಾಟಕ್ಕಾಗಿ ಬಂದರು. ಹಳ್ಳಿಗಳನ್ನು ಸುತ್ತುವರಿದು, ಹೋರಾಟಗಳಲ್ಲಿ ಭಾಗಿ ಇರುವ ಮತ್ತು ಇಲ್ಲದ ಪುರುಷರನ್ನು ಮನೆಯಿಂದ ಹೊರಗೆ ಕರೆದುಕೊಂಡು ಹೋಗಿ ವಿಚಾರಣೆ ಮಾಡಿದರು ಎಂದು ಹೇಳಲಾಗುತ್ತದೆ. ಆದರೆ, ಆ ರಾತ್ರಿಯಲ್ಲಿ ನಡೆದದ್ದು ಕೇವಲ ಹುಡುಕಾಟವಲ್ಲ ಎಂಬುದು ಸಂತ್ರಸ್ತರುಗಳ ಹೇಳಿಕೆಗಳಿಂದ ತಿಳಿದುಬರುತ್ತದೆ. ಹಲವು ಮಹಿಳೆಯರು 13 ವರ್ಷದ ಬಾಲಕಿಯರಿಂದ ಹಿಡಿದು 60 ವರ್ಷದ ವಯಸ್ಸಿನ ಹಿರಿಯರವರೆಗೆ, ಗರ್ಭಿಣಿಯರನ್ನೂ ಸೇರಿದಂತೆ ಸೈನಿಕರಿಂದ ಸಾಮೂಹಿಕ ಅತ್ಯಾಚಾರಕ್ಕೆ ಒಳಗಾದರು ಎಂಬ ಆರೋಪಗಳು ಕೇಳಿಬಂದವು. ಹಳ್ಳಿಯವರು ಹೇಳುವಂತೆ, ಪುರುಷರನ್ನು ಹೊರಗಡೆ ತೆಗೆದುಕೊಂಡು ಹೋಗಿ ಹಿಂಸಿಸಲಾಯಿತು, ಮತ್ತು ಮಹಿಳೆಯರನ್ನು ಮನೆಯೊಳಗೆಯೇ ಹಿಂಸಿಸಲಾಯಿತು.

ಈ ಘಟನೆಯ ನಂತರ, ಸಂತ್ರಸ್ತರು ನ್ಯಾಯಕ್ಕಾಗಿ ಹೋರಾಡಲು ಪ್ರಾರಂಭಿಸಿದರು. ಮಾರ್ಚ್ 1991ರಲ್ಲಿ, ಹಳ್ಳಿಯವರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದರು, ಆದರೆ ತನಿಖೆಯು ನಿಧಾನಗತಿಯಲ್ಲಿತ್ತು. ಭಾರತೀಯ ಸೇನೆಯು ಈ ಆರೋಪಗಳನ್ನು ನಿರಾಕರಿಸಿತು ಮತ್ತು ಇದನ್ನು ಅಪಪ್ರಚಾರದ ಭಾಗ ಅಥವಾ ಉಗ್ರಗಾಮಿಗಳ ಕುತಂತ್ರ ಎಂದು ಕರೆಯಿತು. ಸರ್ಕಾರಿ ತನಿಖಾ ಸಮಿತಿಗಳು ಉದಾಹರಣೆಗೆ ಪ್ರೆಸ್ ಕೌನ್ಸಿಲ್ ಆಫ್ ಇಂಡಿಯಾ ಆರೋಪಗಳನ್ನು ತಳ್ಳಿಹಾಕಿದವು, ಮತ್ತು ಸಂತ್ರಸ್ತೆಯರ ಹೇಳಿಕೆಗಳನ್ನು ಅತಿಶಯೋಕ್ತಿ ಎಂದು ಹೇಳಿದವು. ಆದರೆ, ಅಂತಾರಾಷ್ಟ್ರೀಯ ಮಾನವ ಹಕ್ಕುಗಳ ಸಂಸ್ಥೆಗಳು ಹ್ಯೂಮನ್ ರೈಟ್ಸ್ ವಾಚ್ ಮತ್ತು ಆಮ್ನೆಸ್ಟಿ ಇಂಟರ್‌ನ್ಯಾಷನಲ್‌ನಂತಹ ಸಂಸ್ಥೆಗಳು ಘಟನೆಯನ್ನು ದೃಢೀಕರಿಸಿದವು ಮತ್ತು ಸಂತ್ರಸ್ತೆಯರ ಟೆಸ್ಟಿಮೋನಿಗಳನ್ನು ನಂಬಲಾರ್ಹ ಎಂದು ಪರಿಗಣಿಸಿದವು ಮತ್ತು ಮಾಧ್ಯಮಗಳಲ್ಲಿ ತನಿಖಾ ವರದಿಗಳನ್ನು ಬಿಡುಗಡೆಗೊಳಿಸಿದವು. 2013ರಲ್ಲಿ, ಜಮ್ಮು ಮತ್ತು ಕಾಶ್ಮೀರ ಹೈಕೋರ್ಟ್ ಕೇಸನ್ನು ಮರು ತೆರೆಯಲು ಆದೇಶಿಸಿತು ಮತ್ತು ಸಂತ್ರಸ್ತರು ತಮ್ಮ ಹೋರಾಟವನ್ನು ಮುಂದುವರಿಸಿದರು.

ಈ ಘಟನೆಯು ಕೇವಲ ಒಂದು ದುರಂತವಲ್ಲ, ಬದಲಿಗೆ ಕಾಶ್ಮೀರದಲ್ಲಿ ಮಹಿಳೆಯರ ಮೇಲಿನ ಹಿಂಸೆಯ ಮತ್ತು ಸೇನಾ ದೌರ್ಜನ್ಯದ ಪ್ರತೀಕವಾಗಿದೆ. ಸಂತ್ರಸ್ತರು ಸಮಾಜದಿಂದ ತಿರಸ್ಕಾರಕ್ಕೆ ಒಳಗಾದರು ಕೆಲವರು ವಿವಾಹದಿಂದ ವಂಚಿತರಾದರು, ಇನ್ನು ಕೆಲವರು ಮಾನಸಿಕ ಆಘಾತಕ್ಕೆ ತುತ್ತಾದರು. ಆದರೆ, ಅವರ ಹೋರಾಟವು ಪ್ರೇರಣೆಯ ಮೂಲವಾಗಿದೆ. '' ?'' ಎಂಬ ಪುಸ್ತಕ ಈ ಘಟನೆಯನ್ನು ದಾಖಲಿಸಿವೆ ಮತ್ತು ಪ್ರತಿ ವರ್ಷ ಫೆಬ್ರವರಿ 23ನ್ನು ''ಕಾಶ್ಮೀರಿ ವುಮೆನ್ಸ್ ರೆಸಿಸ್ಟೆನ್ಸ್ ಡೇ'' ಎಂದು ಆಚರಿಸಲಾಗುತ್ತದೆ. ಈ ದಿನವು ಸಂತ್ರಸ್ತರ ಧೈರ್ಯವನ್ನು ಸ್ಮರಿಸುತ್ತದೆ ಮತ್ತು ನ್ಯಾಯಕ್ಕಾಗಿ ಹೋರಾಡುವ ಮಹಿಳೆಯರನ್ನು ಗೌರವಿಸುತ್ತದೆ ಹಾಗೂ ಅವರ ಘನತೆಯನ್ನು ಎತ್ತಿ ಹಿಡಿಯುತ್ತದೆ.



ವಿವಾದದ ಇನ್ನೊಂದು ಆಯಾಮ ನೋಡುವುದಾದರೆ, ಘಟನೆಯ ಕುರಿತು ಆಗಿನ ಸರ್ಕಾರ ಮತ್ತು ಸೇನೆಯ ಪ್ರತಿಕ್ರಿಯೆ. ಭಾರತೀಯ ಸರ್ಕಾರ ಮತ್ತು ಸೇನೆಯು ಇದನ್ನು ''ಮಿಥ್'' ಅಥವಾ ''ಪ್ರಾಪಗಂಡಾ'' ಎಂದು ಕರೆದಿದೆ ಮತ್ತು ಕೆಲವು ತನಿಖೆಗಳು ಆರೋಪಗಳನ್ನು ತಳ್ಳಿಹಾಕಿವೆ. ಆದರೆ, ಸ್ಥಳೀಯರು ಮತ್ತು ಮಾನವ ಹಕ್ಕುಗಳ ಸಂಸ್ಥೆಗಳು ಇದನ್ನು ನಿಜವೆಂದು ನಂಬುತ್ತಾರೆ. ಕೆಲವು ಸಾಮಾಜಿಕ ಮಾಧ್ಯಮಗಳಲ್ಲಿ ಈ ಘಟನೆಯನ್ನು ''ಡಾರ್ಕ್ ನೈಟ್'' ಎಂಬ ರೂಪಕದಲ್ಲಿ ಚರ್ಚಿಸಲಾಗುತ್ತದೆ. ಸಾಮಾಜಿಕ ಜಾಲತಾಣಗಳಲ್ಲಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಕೆಲವು ಪೋಸ್ಟ್‌ಗಳು ಈ ಘಟನೆಯನ್ನು ಸ್ಮರಿಸಿ, ನ್ಯಾಯಕ್ಕಾಗಿ ಈಗಲೂ ಕರೆ ನೀಡುತ್ತವೆ ಮತ್ತು ಚರ್ಚೆ ನಡೆಸುತ್ತವೆ.

35 ವರ್ಷಗಳ ನಂತರವೂ ಈ ಪ್ರಕರಣದ ಸಂತ್ರಸ್ತರು ನ್ಯಾಯಕ್ಕಾಗಿ ಕಾಯುತ್ತಿದ್ದಾರೆ. ಸಂತ್ರಸ್ತರಲ್ಲಿ ಹಲವಾರು ನಿಧನರಾಗಿದ್ದರೆ, ಬದುಕುಳಿದ ಕೆಲವರು ತಮ್ಮ ಕಥೆಗಳನ್ನು ಹೇಳುತ್ತಾ, ಕಾಶ್ಮೀರದಲ್ಲಿ ಮಹಿಳೆಯರ ಮೇಲಿನ ಹಿಂಸೆಯ ವಿರುದ್ಧ ಹೋರಾಡುತ್ತಿದ್ದಾರೆ. ಇದು ಕೇವಲ ಒಂದು ಘಟನೆಯಲ್ಲ, ಬದಲಿಗೆ ಸಂಘರ್ಷದ ಪ್ರದೇಶಗಳಲ್ಲಿ ನಡೆಯುವ ದೌರ್ಜನ್ಯದ ಸಾಮಾನ್ಯ ಚಿತ್ರಣವಾಗಿದೆ. ನ್ಯಾಯದ ಕಗ್ಗತ್ತಲೆಯಲ್ಲಿ ಬೆಳಕು ಹರಡುವವರೆಗೆ, ಕುನನ್ ಪೋಶ್ಪೋರ ಇತಿಹಾಸದಲ್ಲಿ ಒಂದು ಡಾರ್ಕ್ ನೈಟ್ ಕಗ್ಗತ್ತಲಾಗಿ ಉಳಿಯುತ್ತದೆ.

ಇದನ್ನು ಸಂಘಪರಿವಾರ ಸಹಿಸೋದಿಲ್ಲ. ಕಾಶ್ಮೀರಿ ಪಂಡಿತರ ಮೇಲಿನ ದಾಳಿಗಳ ಕುರಿತು ಭಾವನಾತ್ಮಕವಾಗಿ ದೇಶದ ಜನತೆಯನ್ನು ಕೆರಳಿಸಿ ಅದರಿಂದ ರಾಜಕೀಯ ಲಾಭ ಪಡೆದು ಕಾಶ್ಮೀರದ ಜನತೆಯ ಸಂವಿಧಾನಿಕ ಹಕ್ಕಾಗಿದ್ದ ವಿಧಿ 370ಯನ್ನು ಕಸಿದು ಪ್ರಜಾಪ್ರಭುತ್ವಕ್ಕೆ ವಿರುದ್ಧವಾಗಿ ದೇಶವನ್ನು ನಡೆಸುವ ಬಿಜೆಪಿಯ ಅಂಗವಾದ ಸಂಘಪರಿವಾರದ ವಿದ್ಯಾರ್ಥಿ ಗೂಂಡಾ ಪಡೆ ದೇಶದಲ್ಲಿ ವಾಕ್ ಸ್ವಾತಂತ್ರ್ಯ ಮತ್ತು ಭಿನ್ನಾಭಿಪ್ರಾಯದ ಸ್ವಾತಂತ್ರ್ಯವನ್ನು ಕಸಿದುಕೊಂಡು ಬಿಜೆಪಿ ಸರ್ಕಾರ ನಡೆಸುವಾಗ, ದೇಶದ ಏಕತೆಗೆ ವಿರುದ್ಧವಾಗಿ ಈ ರೀತಿಯ ಶೈಕ್ಷಣಿಕ ಅಭಿವೃದ್ಧಿಗಳನ್ನು ತಡೆಯುತ್ತದೆ. ದೇಶದ ಎಲ್ಲಾ ಜನತೆ ಬಿಜೆಪಿ ಸೆಲ್‌ನಿಂದ ಬರುವ ಕೇವಲ ವಾಟ್ಸಾಪ್ ಯೂನಿವರ್ಸಿಟಿಗಳ ಬಾಲಂಗೋಚಿಗಳಾಗಬೇಕೆಂದು ಬಯಸುತ್ತದೆ. ಈ ಷಡ್ಯಂತ್ರವನ್ನು ರಾಜ್ಯದ ಜನತೆ ಒಟ್ಟಾಗಿ ವಿರೋಧಿಸಿ ಕರ್ನಾಟಕ ಮಣ್ಣಿನ ಚಿಂತನೆಯ, ಆವಿಷ್ಕಾರಗಳ, ಸಂಶೋಧನೆಯ ಪರಂಪರೆಯನ್ನು ಉಳಿಸಬೇಕಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR